ಸಂಪುಟ : 10 ಸಂಚಿಕೆ: 35 ಪುಟ : 4+2 ಬೆಲೆ: 3.00 ಗುರುವಾರ ಮಾರ್ಚ್ 6 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 35 Pages : 4+2 Price : 3.00 Thursday March 6 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 6 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 7ರಲ್ಲಿ ಪೆಂಡಾರ ಓಣಿ, ಮಲ್ಲೇಶಪ್ಪ, ನಂದರಗಿಯವರ ಲೈನ್, ಗಚ್ಚಿಯವರ, ಜಮಲಮ್ಮ ಗುಡಿ, ಪಿಂಡಕೂರ ಅವರ ಲೈನ್, ಉಳಿದ ಭಾಗಗಳು, ವಾರ್ಡ್ ನಂ. 27 ವೀರನಾರಾಯಣ ಬಡಾವಣೆ, ಕೆ.ಎಚ್.ಪಾಟೀಲರ ಬಡಾವಣೆ ಉಳಿದ ಭಾಗಗಳು. ವಾರ್ಡ್ ನಂ. 33,31,32,–ನಾವಳ್ಳಿ, ಬಸಯ್ಯ, ಪಿಡ್ಡಿಯವರ ಮನೆ ಲೈನ್, ಪುರದ ಭಾಗ–2, ಗುಜ್ಜರ ಬಸ್ತಿ, ಜೋಡ ಮಾರುತಿ, ಕಿಲ್ಲಾ ಸುಣಗಾರ, ಹಳೇ ಕಚೇರಿ ರಸ್ತೆ, ಕೋಳಿಕೇರಿ ಮೂಲಿ ಉಳಿದ ಭಾಗಗಳು. ವಾರ್ಡ್ ನಂ. 22 –ಪಾಮಡೆವರ ಲೈನ್, ಅಕ್ಕಿಯವರ ಲೈನ್, ನಿಂಗಪ್ಪನ ಲೈನ್, ಸ್ವಾಮಿಯವರ ಲೈನ್, ಸಫಾರಿಯವರ ಲೈನ್, ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 27, 30ರ ಕಾಶಿ ವಿಶ್ವನಾಥ್ ನಗರ, ಹನುಮಂತ ದೇವರ ಗುಡಿ, ದುರ್ಗಮ್ಮನ ಗುಡಿ, ಕಣವಿಯವರ, ಮಾಕೋಟೆಶ್ವರ ಗುಡಿ, ವಿ.ಆರ್.ಎಲ್ ಆಫೀಸ್, ಟಿ.ವಿ.ಎಸ್.ಶೋ, ಪೊಲೀಸ್ ಕ್ವಾರ್ಟರ್ಸ್, ಮುತ್ತಿನಪೆಂಡಿಮಠ, ಎಸ್.ಪಿ. ಆಫೀಸ್, ಪಾಶಿಯವರ ಉಳಿದ ಭಾಗಗಳು

ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

### ಜಿಲ್ಲಾ ಮಟ್ಟದ ಕಣ್ಗಾವಲು ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚನೆ

# ಸಾಂಕ್ರಾಮಿಕ ಕಾಯಿಲೆಗಳ ಬಗ್ಗೆ ಜಾಗೃತಿ ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಸಾಂಕ್ರಾಮಿಕ ರೋಗಗಳು ಹರಡದಂತೆ ಮುಂಜಾಗ್ರತೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಕಣ್ಗಾವಲು ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರಿನಿಂದ ಹರಡಬಹುದಾದ ಸಾಂಕ್ರಾಮಿಕ ಕಾಯಿಲೆಗಳ ಬಗ್ಗೆ ಜಾಗೃತಿ ವಹಿಸಬೇಕು. ಗ್ರಾಮಗಳಲ್ಲಿಯ ಕುಡಿಯುವ ನೀರಿನ ಮೂಲಗಳ ಪರೀಕ್ಷೆ ಹಾಗೂ ಸರಬರಾಜುವಿನ ಬಗ್ಗೆ ನಿರಂತರವಾಗಿ ಕ್ರಮವಹಿಸಬೇಕು. ಸಾಂಕ್ರಾಮಿಕ ರೋಗಗಳಾದ ಕರಳುಬೇನೆ, ಕಾಲರಾ, ವಿಷಮ ಶೀತಜ್ವರ, ಕಾಮಾಲೆ, ಕೆಎಫ್‌ಡಿ, ಹಕ್ಕಿಜ್ವರ, ನಾಯಿಕಡಿತ ಹಾಗೂ ಹಾವು ಕಡಿತ ಕುರಿತು ಮುಂಜಾಗ್ರತೆ ಕ್ರಮ ಕೈಗೊಳ್ಳಬೇಕು.

ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರಿನಿಂದ ಹರಡಬಹುದಾದ ಸಾಂಕ್ರಾಮಿಕ ಕಾಯಿಲೆಗಳ ಬಗ್ಗೆ ಜಾಗೃತೆ ವಹಿಸಬೇಕು. ಕುಡಿಯುವ ನೀರಿನ ಪೈಪ್‌ಲೈನ್‌ಗಳಲ್ಲಿ ಕಲುಷಿತ ನೀರು ಸೇರಿಕೊಳ್ಳದ ಹಾಗೆ ಕ್ರಮವಹಿಸಲು ಸಂಬಂಧಪಟ್ಟ ಗ್ರಾ.ಪಂ ಅಧಿಕಾರಿಗಳಿಗೆ ತಿಳಿಸಬೇಕು.

ಎಲ್ಲ ಓಎಚ್‌ಟಿಗಳನ್ನು ನಿಯಮಿತವಾಗಿ ಸರಿಯಾಗಿ ಸ್ವಚ್ಛಗೊಳಿಸಲು ಕ್ರಮ ವಹಿಸಬೇಕು. ಓಎಚ್‌ಟಿಗಳಲ್ಲಿ ಶೇಖರಿಸಿದ ನೀರನ್ನು



ಕ್ರಮಬದ್ಧವಾಗಿ ಕ್ಲೋರಿನೇಷನ್ ಮಾಡಿ ಸರಬರಾಜು ಮಾಡಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಕೆಎಫ್‌ಡಿ ನಿಯಂತ್ರಣಕ್ಕೆ ಸಂಬಂಧಪಟ್ಟ ಇಲಾಖೆಗಳು ಅಗತ್ಯ ಸಹಕಾರ ನೀಡಬೇಕು. ನಾಯಿ ಕಡಿತಕ್ಕೆ ಸಂಬಂಧಿಸಿದಂತೆ ಪ್ರತಿ ತಿಂಗಳು ಜಿಲ್ಲೆಯಲ್ಲಿ ಸುಮಾರು 1000ಕ್ಕಿಂತ ಹೆಚ್ಚು ಪ್ರಕರಣಗಳು ವರದಿಯಾಗುತ್ತಿದ್ದು, ನಾಯಿ ಕಡಿತಕ್ಕೆ ಸಂಬಂಧಿಸಿದಂತೆ ಲಸಿಕೆಯನ್ನು ಎಲ್ಲ ಆರೋಗ್ಯ ಸಂಸ್ಥೆಗಳಲ್ಲಿ ಕಾಯ್ದಿರಿಸಿಡಲು ನಿರ್ದೇಶಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಸೊಳ್ಳೆಗಳಿಂದ ಹರಡುಬಹುದಾದ ರೋಗಗಳನ್ನು ತಡೆಗಟ್ಟಲು ಚರಂಡಿ, ಗಟಾರಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ನಿಂತ ನೀರಿನಲ್ಲಿ ಸೊಳ್ಳೆ ಪ್ರಮಾಣ ಹೆಚ್ಚಾಗದಂತೆ ಲಾರ್ವಾ ಸಮೀಕ್ಷೆಯನ್ನು ತೀವ್ರಗೊಳಿಸಬೇಕು ಎಂದು ಸೂಚಿಸಿದರು.

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಠೋಡ್ ಮಾತನಾಡಿ, ಜಿಲ್ಲೆಯಲ್ಲಿ 2024ರಲ್ಲಿ 410 ಡೆಂಘೀ ಪ್ರಕರಣಗಳು ಹಾಗೂ 14 ಚಿಕುನ್‌ಗುನ್ಯಾ ಪ್ರಕರಣಗಳು ವರದಿಯಾಗಿವೆ. ಗದಗ ಜಿಲ್ಲೆಯು ಕೂಡ ಕೆಎಫ್‌ಡಿ ಬಾಧಿತ ಎಂಡಮಿಕ್ ಜಿಲ್ಲೆಯಾಗಿದ್ದು, ಕೆಎಫ್‌ಡಿ ವೈರಸ್‌ನಿಂದ ಸೋಂಕಿತ ಉಣ್ಣೆಯು ಕಚ್ಚುವುದರಿಂದ ಹರಡುವ ವೈರಲ್ ಜ್ವರವಾಗಿದೆ.

> ಜಿಲ್ಲೆಯಲ್ಲಿ 2024ರಲ್ಲಿ ಒಟ್ಟು 206 ಹಾವು ಕಡಿತದ ಪ್ರಕರಣಗಳು ವರದಿಯಾಗಿದ್ದು, ಪ್ರಕರಣಗಳಿಗೆ ಸಂಬಂಧಿಸಿದಂತೆ ಲಸಿಕೆಗಳನ್ನು ಅಗತ್ಯಕ್ಕನುಗುಣವಾಗಿ ಆರೋಗ್ಯ ಸಂಸ್ಥೆಗಳಲ್ಲಿ ಕಾಯ್ದಿರಿಸಬೇಕು. ಹಾವು ಕಡಿತದ ಹೊಸದಾಗಿ ನಿರ್ದೇಶನಾಲಯದ ಮಾರ್ಗಸೂಚಿಯನ್ನು ಅನುಸರಿಸಿ ಚಿಕಿತ್ಸೆ ನೀಡಲು ವೈದ್ಯಾಧಿಕಾರಿಗಳಿಗೆ ತರಬೇತಿಯನ್ನು ನೀಡಲು ಹಾಗೂ ರಾಷ್ಟ್ರೀಯ ಅಯೋಡಿನ್ ಕೊರತೆಯ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಅಯೋಡಿನ್ ಮಹತ್ವವನ್ನು ತಿಳಿಸುವ ಆರೋಗ್ಯ ಶಿಕ್ಷಣವನ್ನು ನೀಡಲು ಸಭೆಯಲ್ಲಿ ಸೂಚಿಸಲಾಯಿತು.

ಈ ಖಾಯಿಲೆಗೆ ಯಾವುದೇ ನಿರ್ದಿಷ್ಟ ಚಿಕಿತ್ಸೆ ಇಲ್ಲ. ಜಿಲ್ಲೆಯಿಂದ ಈಗಾಗಲೇ 11 ರಕ್ತದ ಮಾದರಿಗಳನ್ನು ಹಾಗೂ 16–ಟಿಕ್‌ಪೂಲ್ ಮಾದರಿಗಳನ್ನು ಕೆಎಫ್‌ಡಿ ವೈರಸ್ ಪತ್ತೆಗಾಗಿ ವಿಡಿಎಲ್ ಶಿವಮೊಗ್ಗ ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು. ಎಲ್ಲ ರಕ್ತದ ಮಾದರಿಗಳು ನೆಗೆಟಿವ್ ಎಂದು ವರದಿಯಾಗಿದ್ದು, ಟಿಕ್‌ಪೂಲ್ ಮಾದರಿಗಳ ಫಲಿತಾಂಶ ನಿರೀಕ್ಷಣೆಯಲ್ಲಿವೆ. ಜಿಲ್ಲೆಯಲ್ಲಿ ಯಾವುದೇ ಮಂಗಗಳ ಸಾವಿನ ವರದಿಯಾಗಿಲ್ಲ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ. ಮೀನಾಕ್ಷಿ, ವಿವಿಧ ಇಲಾಖೆಯ ಅಧಿಕಾರಿಗಳು, ತಾಲೂಕಾ ಆರೋಗ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

---

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ ಗದಗ ಇಲ್ಲಿ ಖಾಲಿ ಇರುವ ಕಂಪ್ಯೂಟರ್ ಆಪರೇಟರ್, ಸ್ಪೀಚ್ ಥೆರಪಿಸ್ಟ್ ಮತ್ತು ಆಡಿಯಾಲಿಜಿಸ್ಟ್, ಮೊಬಿಲಿಟಿ ಇನ್‌ಸ್ಟ್ರಕ್ಟರ್, ಇಯರ್ ಮೋಲ್ಡ್ ಟೆಕ್ನಿಷಿಯನ್ ಈ ಹುದ್ದೆಗಳನ್ನು ಭರ್ತಿಮಾಡಲು ಅರ್ಜಿ ಕರೆಯಲಾಗಿದೆ.

ಆಸಕ್ತ ಅಭ್ಯರ್ಥಿಗಳು ಮಾರ್ಚ್ 20 ರೊಳಗಾಗಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಜಿಲ್ಲಾ ಶಾಖೆ, ಕೆ,ಹೆಚ್,ಪಾಟೀಲ ಸ್ಟೇಡಿಯಂ ಎದುರು, ಗದಗ ಈ ಕಚೇರಿಗೆ ಅರ್ಜಿ ಸಹಿತ ಅಂಕಪಟ್ಟಿಗಳ ನಕಲು ಪ್ರತಿಯನ್ನು ದೃಢೀಕರಿಸಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ಸಮಯದಲ್ಲಿ (ಸರಕಾರಿ ರಜೆಗಳನ್ನು ಹೊರತುಪಡಿಸಿ) ಅಭ್ಯರ್ಥಿಗಳು ಖುದ್ದಾಗಿ ಬಂದು ಮಾಹಿತಿ ಪಡೆಯಬಹುದಾಗಿದೆ. ಅರ್ಜಿ ಸಲ್ಲಿಸಿದ ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನಕ್ಕಾಗಿ ದೂರವಾಣಿ/ಎಸ್,ಎಮ್,ಎಸ್,/ ಕಚೇರಿ ನೋಟಿಸ್ ಬೋರ್ಡಿನ ಮುಖಾಂತರ ಸಂದರ್ಶನ ಸ್ಥಳ ಮತ್ತು ಸಮಯ ತಿಳಿಸಲಾಗುವುದು. ಮಾಹಿತಿಗಾಗಿ ನೋಡಲ್ ಅಧಿಕಾರಿಗಳು ವರದಾ ಎನ್ ಕೋಲಕಾರ, ಮೊ: 7795100806 ಶ್ರೀಮತಿ ವಾಗ್ದೇವಿ ಜಿ ಕುಲಕರ್ಣಿ –9481126296 ಇವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

---

### ಬಜೆಟ್ ಪೂರ್ವ ಅಧಿವೇಶನದಲ್ಲಿ ಅಸಮಾಧಾನ ಹೊರಹಾಕಿದ ಶಾಸಕ ಡಾ. ಚಂದ್ರು ಲಮಾಣಿ

# ಜನರು ಕೇಳುವ ಪ್ರಶ್ನೆಗಳಿಗೆ ಉತ್ತರಿಸಲಾಗುತ್ತಿಲ್ಲ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬೆಂಗಳೂರಿನ ವಿಧಾನಸಭೆಯಲ್ಲಿ 2025–26ನೇ ಸಾಲಿನ ಬಜೆಟ್ ಪೂರ್ವ ಅಧಿವೇಶನದಲ್ಲಿ ಬುಧವಾರ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಶಾಸಕ ಡಾ.ಚಂದ್ರು ಲಮಾಣಿ ಅವರು ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದಿಂದ ಯಾವುದೇ ಅಭಿವೃದ್ಧಿ ಕಾರ್ಯಗಳು ಆಗುತ್ತಿಲ್ಲವಾದ್ದರಿಂದ ಜನರು ಕೇಳುವ ಪ್ರಶ್ನೆಗಳಿಗೆ ಉತ್ತರಿಲಾಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಧಿವೇಶನದಲ್ಲಿ ಚುಕ್ಕೆ ಗುರುತಿನ ಪ್ರಶ್ನೆಯಡಿಯಲ್ಲಿ ಮಾತನಾಡಿದ ಶಾಸಕರು, 2018–19ನೇ ಸಾಲಿಗೆ ಕರ್ನಾಟಕ ತಾಂಡ ಅಭಿವೃದ್ಧಿ ನಿಗಮದ ಸರ್ಕಾರಿ ಸಾಂಸ್ಥಿಕ



ಕೋಟಾದಡಿ ನಿಗದಿಪಡಿಸಿದ ಕೋಟಾ ಪೂರ್ಣಗೊಳಿಸಿಲ್ಲ. ತಾಂಡಾ ಅಭಿವೃದ್ಧಿ, ಅಂಬೇಡ್ಕರ್ ನಿಗಮದ ರೈತ ಫಲಾನುಭವಿಗಳಿಗೆ ಕೊಳವೆ ಬಾವಿಗಳನ್ನು ಕೊರೆಯಲು ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಅಂಬೇಡ್ಕರ್, ತಾಂಡಾ, ಹಟ್ಟಿಗಳಲ್ಲಿರುವ ಜನರಿಗೆ ಮೂಲಭೂತ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಸ್ಥಾಪಿಸಿದ ಅಭಿವೃದ್ಧಿ ನಿಗಮಗಳ ಸ್ಕೀಮ್‌ಗಳು ಹೆಸರಿಗೆ ಮಾತ್ರ ಎನ್ನುವಂತಾಗಿವೆ.

ಉಪಸಭಾಧ್ಯಕ್ಷರೂ ಆದ ನೀವೂ(ರುದ್ರಪ್ಪ ಲಮಾಣಿ) ಸಹ ತಾಂಡಾ ನಿಗಮಕ್ಕೆ ಬರುವವರು. ಈ ಸರ್ಕಾರದಲ್ಲಿ ನೀವೆಷ್ಟು ಅಭಿವೃದ್ಧಿ ಕಾರ್ಯಗಳಿಗೆ ಭೂಮಿಪೂಜೆ ಮಾಡಿದ್ದೀರಿ ಎಂದು ವಿಧಾನಸಭಾ ಉಪಾಧ್ಯಕ್ಷರನ್ನು ಪ್ರಶ್ನಿಸಿದರು. ಕೊಳವೆಬಾವಿಗೆ ಸಂಬಂಧಿಸಿದಂತೆ ಕ್ಷೇತ್ರದಲ್ಲಿ ನೂರಾರು ಅರ್ಜಿಗಳು ಬರುತ್ತವೆ. ಆದರೆ ಸರಕಾರ ನೀಡುತ್ತಿರುವದು ಬೆರಳೆಣಿಕೆಯಷ್ಟು. ಇದರಿಂದ ನಾನಷ್ಟೇ ಅಲ್ಲದೇ ರಾಜ್ಯದ ಎಲ್ಲ ಶಾಸಕರು ರೈತರು ಕೇಳುವ ಪ್ರಶ್ನೆಗಳಿಗೆ ಉತ್ತರಿಸದಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಶಾಸಕ ಡಾ.ಚಂದ್ರು ಲಮಾಣಿ ಅವರ ಪ್ರಶ್ನೆಗೆ ಧ್ವನಿಗೂಡಿಸಿದ ಸದನದ ಹಲವು ಶಾಸಕರು ಪ್ರಸ್ತುತ ತಾಲೂಕುಗಳಲ್ಲಿ ನಿಗಮಗಳಿಂದ ನೀಡುತ್ತಿರುವ ಗುರಿಗಳು/ ಅನುದಾನ ಸಾಕಾಗುತ್ತಿಲ್ಲ. ಕಾರಣ ಗುರಿಗಳನ್ನು ಹೆಚ್ಚಿಸಿ ಪ್ರತಿ ತಾಲೂಕುಗಳಿಗೆ ಹೆಚ್ಚಿನ ಅನದಾನ ನೀಡಬೇಕೆಂದು ಆಗ್ರಹಿಸಿದರು. ಇದಕ್ಕೆ ಉತ್ತರಿಸಿದ ಸಚಿವರು, ಕೊಳವೆ ಬಾವಿಗಳನ್ನು ಕೊರೆಯುವ ಸಂಬಂಧಿಸಿದಂತೆ ಸಕಾರಾತ್ಮಕವಾಗಿ ಸ್ಪಂದಿಸಿ ಶೀಘ್ರವೇ ಕ್ರಮವನ್ನು ಕೈಗೊಳ್ಳುತ್ತೇವೆ ಎಂದು ತಿಳಿಸಿದರು.

---

### ಅಂತಾರಾಷ್ಟ್ರೀಯ ಶಿಬಿರಕ್ಕೆ ಕೃಷಿ ಸಂಗಮೇಶ ಮೆಣಸಿನಕಾಯಿ ಆಯ್ಕೆ: ಸಭಾಪತಿ ಬಸವರಾಜ ಹೊರಟ್ಟಿ ಅಭಿನಂದನೆ

# ಪ್ರತಿಭೆ ಮೆರೆದ ಗದುಗಿನ ಕುವರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮೂಲತಃ ಗದಗಿನ ಗಂಜಿ ಬಸವೇಶ್ವರ ಸರ್ಕಲ್ ಬಳಿಯ ನಿವಾಸಿ, ಸದ್ಯ ಹುಬ್ಬಳ್ಳಿಯ ಕೇಂದ್ರೀಯ ವಿದ್ಯಾಲಯ ನಂ. 1ರ 10ನೇ ತರಗತಿ ವಿದ್ಯಾರ್ಥಿನಿ ಕೃಷಿ ಸಂಗಮೇಶ ಮೆಣಸಿನಕಾಯಿ ಅಂತಾರಾಷ್ಟ್ರೀಯ ಖಗೋಳಶಾಸ್ತ್ರ ಶಿಬಿರಕ್ಕೆ ಆಯ್ಕೆಯಾಗಿದ್ದು, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸಾಧಕ ವಿದ್ಯಾರ್ಥಿನಿಯನ್ನು ಅಭಿನಂದಿಸಿದ್ದಾರೆ.

ಮಾರ್ಚ್ 11ರಿಂದ 14ರವರೆಗೆ ಥೈಲ್ಯಾಂಡ್‌ನ ಚಿಯಾಂಗ್ ಮಾಯ್ (Chiang Mai) ಪ್ರಾಂತ್ಯದಲ್ಲಿ ನಡೆಯಲಿರುವ ಆಗ್ನೇಯ ಏಷ್ಯಾ ರಾಷ್ಟ್ರಗಳ ಸಂಘ (ASEAN) ಅಸ್ಟ್ರೋನೊಮಿ ಕ್ಯಾಂಪ್‌ಗೆ (ASEAN Astronomy Camp-ಎ.ಎ.ಸಿ.) ಕೃಷಿ ಆಯ್ಕೆಯಾಗಿದ್ದಾಳೆ. ಕೃಷಿ, ಗದಗ ಮೂಲದ, ಸದ್ಯ ಹುಬ್ಬಳ್ಳಿಯಲ್ಲಿ ದಿ ಟೈಮ್ಸ್ ಆಫ್ ಇಂಡಿಯಾದ



ವಿಶೇಷ ಪ್ರತಿನಿಧಿಯಾಗಿರುವ ಸಂಗಮೇಶ ಮೆಣಸಿನಕಾಯಿ ಅವರ ಪುತ್ರಿಯಾಗಿದ್ದಾಳೆ.

ಈ ಆಯ್ಕೆಗೆ ಕೇಂದ್ರೀಯ ವಿದ್ಯಾಲಯ ನಂ.1ರ ಶಿಕ್ಷಕರು ಏಪ್ರಿಲ್ 2024ರಲ್ಲಿ PM SHRI (PM Schools for Rising India) ಅನುದಾನದಲ್ಲಿ ಬೆಂಗಳೂರಿನ ಭಾರತೀಯ ಅಂತರಿಕ್ಷ ಸಂಶೋಧನಾ ಸಂಸ್ಥೆಗೆ (ISRO) ವಿಜ್ಞಾನ ಪ್ರವಾಸ ಕರೆದೊಯ್ದಿದ್ದರು. ಅದೇ ವೇಳೆ ವಿಜ್ಞಾನಿಗಳಾದ ಪಿ. ವೀರಮುತುವೆಲ್, ನಿಗಾರ್ ಶಾಜಿ, ಪ್ರಶಾಂತ ಬಾಗಲಕೋಟ ಹಾಗೂ ಇತರರ ಜೊತೆ ಸಣ್ಣ ಸಂವಾದ ನಡೆಸಿದ್ದೆ. ಅವರ ಮಾತುಗಳಿಂದ ಅಂತರಿಕ್ಷ ಮತ್ತು ಖಗೋಳಶಾಸ್ತ್ರದಲ್ಲಿ ಹೆಚ್ಚಿನ ಆಸಕ್ತಿ ಉಂಟಾಯಿತು. ಈ ಆಯ್ಕೆಯಲ್ಲಿ ನನ್ನ ಶಾಲೆ, ಪಿ.ಎಂ.ಶ್ರೀ ಅನುದಾನ, ಇಸ್ರೋ ಹಾಗೂ ಅಲ್ಲಿನ ವಿಜ್ಞಾನಿಗಳ ಪ್ರೇರಣೆಯೇ ಕಾರಣ ಎಂದು ಕೃಷಿ ತಿಳಿಸಿದ್ದಾಳೆ.

ಕೃಷಿ ಇದೇ ಶೈಕ್ಷಣಿಕ ವರ್ಷದಲ್ಲಿ ಕೇರಳದ ಎರ್ನಾಕುಲಂನಲ್ಲಿ ನಡೆದ ಕೇಂದ್ರೀಯ ವಿದ್ಯಾಲಯಗಳ ರಾಷ್ಟ್ರೀಯ ಕ್ರೀಡಾಕೂಟದಲ್ಲಿ 3,000 ಮೀ. ಮತ್ತು 1,500 ಮೀಟರ್ ಓಟಗಳಲ್ಲಿಯೂ ಬೆಂಗಳೂರು ಪ್ರಾದೇಶಿಕ ವಿಭಾಗವನ್ನು ಪ್ರತಿನಿಧಿಸಿ, ಸಮಾಧಾನಕರ ಬಹುಮಾನ ಪಡೆದಿರುವುದು ಗಮನಾರ್ಹ.

---

### ಪಂ. ಡಾ. ಪುಟ್ಟರಾಜ ಕವಿ ಗವಾಯಿಗಳವರ 111ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಡಾ. ವೀರೇಶ್ವರ ಶಿವಯೋಗಿಗಳು

# ಅಂಧರ ಸಂಗೀತದಲ್ಲಿ ಪುಟ್ಟರಾಜರು ಚಿರಸ್ಥಾಯಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅಂಧರ ಸಂಗೀತದ ಧ್ವನಿಯಲ್ಲಿ ಪುಟ್ಟಯ್ಯಜ್ಜನವರು ಇನ್ನೂ ಜೀವಂತವಾಗಿದ್ದಾರೆ. ಇಂತಹ ಕಾರ್ಯಕ್ರಮಗಳು ಜಗದಲ್ಲಿ ಸಂತ–ಶರಣರನ್ನು ಸ್ಮರಿಸುವುದರ ಜೊತೆಗೆ ಅವರ ಸಾಕ್ಷಾತ್ ಸನ್ಮಾರ್ಗಗಳನ್ನು ಅನುಸರಿಸಲು ನಿದರ್ಶನವಾಗಿವೆ ಎಂದು ಪ. ಪೂ. ವೀರೇಶ್ವರ ಶಿವಯೋಗಿಗಳು ನುಡಿದರು.

ಡಾ. ವ್ಹಿ. ಬಿ. ಹಿರೇಮಠ ಮೆಮೋರಿಯಲ್ ಪ್ರತಿಷ್ಠಾನದ ಹಾಗೂ ಅಶ್ವಿನಿ ಪ್ರಕಾಶನ ಗದಗ ಇವರ ಆಶ್ರಯದಲ್ಲಿ ಜರುಗಿದ ಪಂಡಿತ ಡಾ. ಪುಟ್ಟರಾಜ ಕವಿ ಗವಾಯಿಗಳವರ 111ನೇ ಜಯಂತ್ಯುತ್ಸವ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಡಾ. ಪಂಡಿತ ರಾಜಗುರು ಕಲಕೇರಿ, ಧರ್ಮ–ಸಂಸ್ಕೃತಿಗಳ ಮಾನವನನ್ನು ಸುಸಂಸ್ಕೃತರನ್ನಾಗಿಸುತ್ತವೆ. ಧರ್ಮ




ಮರೆತರೆ, ಸಂಸ್ಕೃತಿ ಮರೆತರೆ ಇಂತಹ ಕಾರ್ಯಕ್ರಮಗಳಿಗೆ ಬೆಲೆ ಸಿಗಲಾರದು ಎಂದು ಅಭಿಪ್ರಾಯಪಟ್ಟರು.

ಪ್ರಾಸ್ತಾವಿಕವಾಗಿ ಮಾತನಾಡಿದ ಡಾ. ಎಸ್.ಎನ್. ವೆಂಕಟಾಪೂರ, ಸಹೋದರತೆ, ಸ್ನೇಹತ್ವದಲ್ಲಿ ಡಾ. ವ್ಹಿ.ಬಿ. ಹಿರೇಮಠರವರನ್ನು ಮೀರಿಸಲು ಯಾರಿಂದಲೂ ಸಾಧ್ಯವಿಲ್ಲ. ಇದು ಬರೀ ಮನೆಯಲ್ಲ, ಸಾಹಿತ್ಯದ ಮಹಾಮನೆ ಎಂದರು. ಮುಖ್ಯ ಅತಿಥಿಗಳಾಗಿ ಮಲ್ಲಿಕಾರ್ಜುನ ಭೃಂಗಿಮಠ, ಕೆ.ಎಚ್. ಬೇಲೂರ, ಡಾ. ರಶ್ಮಿ ಅಂಗಡಿ ಪಾಲ್ಗೊಂಡಿದ್ದರು.

> ಮುದ್ರಣಕಾಶಿ ಗದಗನಲ್ಲಿ ಪ್ರಪ್ರಥಮವಾಗಿ ಪ. ಪೂ. ಡಾ. ವಿರೇಶ್ವರ ಶಿವಯೋಗಿಗಳಿಗೆ ಗ್ರಂಥ ತುಲಾಭಾರ ಅಶ್ವಿನಿ ಪ್ರಕಾಶನದ ವತಿಯಿಂದ ನೆರವೇರಿತು. ಸಾಹಿತಿ, ಲೈನ್‌ಮ್ಯಾನ್ ಮಹೇಶ ವಡ್ಡಿನರವರ ಪುತ್ರ ಪುಟ್ಟರಾಜ ವಡ್ಡಿನ 2ನೇ ವರ್ಷದ ಹುಟ್ಟುಹಬ್ಬದ ಆಚರಣೆ ಶ್ರೀಗಳ ಆಶೀರ್ವಾದದೊಂದಿಗೆ ಜರುಗಿತು.

20 ಜನ ಸಾಹಿತಿ, ಕಲಾವಿದ ಸಾಧಕರಿಗೆ ಶ್ರೀ ಗುರುಪುಟ್ಟರಾಜ ಗವಾಯಿಗಳ ಸದ್ಭಾವನ ಪ್ರಶಸ್ತಿ ನೀಡಿ ಗೌರವಿಸಲಾಯಿತು. 16 ಜನ ಕವಿಗಳು ಕವಿಗೋಷ್ಠಿಯಲ್ಲಿ ಪಾಲ್ಗೊಂಡು ಕವನವಾಚನ ಮಾಡಿದರು. ಡಾ. ಹೇಮಲತಾ ಹಿರೇಮಠ ದಂಪತಿ ಜೆ.ಸಿ. ಜಂಪಣ್ಣವರ, ಪ್ರಸಾದ ಸೇವೆ ನೀಡಿದ ಶ್ರೀ ಶಿವಕುಮಾರ ದೇವದುರ್ಗಮಠರನ್ನು ಸನ್ಮಾನಿಸಿ ಗೌರವಿಸಲಾಯಿತು.

ವಾಯಲಿನ್ ಮತ್ತು ಶಹನಾಯ್ ವಾದಕರಾದ ವಿರೇಶ್ವರ ಪುಣ್ಯಾಶ್ರಮದ ಶ್ರೀ ನಾರಾಯಣಪ್ಪ ವಿ.ಹಿರೇಕೊಳಚಿ ಇವರಿಂದ ಸಂಗೀತ ಸೇವೆ ಜರುಗಿತು.ವೀರಯ್ಯ ಹೊಸಮಠ ಪ್ರಾರ್ಥಿಸಿದರು. ಸುಷ್ಮಾ ಹಿರೇಮಠ ಸ್ವಾಗತಿಸಿದರು. ವಡ್ಡಿನ ನಿರೂಪಿಸಿದರು. ವ್ಹಿ.ವ್ಹಿ. ಹಿರೇಮಠ ವಂದಿಸಿದ್ದರು. ಚಿದಾನಂದ ಸಾಲಿಮಠ, ಎಂ.ಎಂ. ಶಿರೋಳಮಠ, ಪ್ರಶಾಂತ ದೊಡ್ಡಮನಿ, ಪುಟ್ಟರಾಜ ಹಿರೇಮಠ, ರಮೇಶ ಹತ್ತಿಕಾಳ, ಬಸಮ್ಮ ಹರ್ತಿ ಸಮಾರಂಭದಲ್ಲಿ ಉಪಸ್ಥಿತರಿದ್ದರು.

## ಸಂಪಾದಕೀಯ

# ದಲಿತರ ಕಲ್ಯಾಣಕ್ಕೆ ಮೀಸಲಿಟ್ಟ ಹಣ ಅನ್ಯ ಕಾರ್ಯಕ್ಕೆ ಬಳಸದಿರಿ

ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರ ಕಲ್ಯಾಣಕ್ಕಾಗಿ ಮೀಸಲಿಟ್ಟ, ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಪರಿಶಿಷ್ಟ ಪಂಗಡ ಉಪಯೋಜನೆ ಹಣವನ್ನ ಅನ್ನ ಕಾರ್ಯಕ್ಕೆ ಬಳಕೆ ಮಾಡಿಕೊಳ್ಳಲಾಗಿದೆ.

ರಾಜ್ಯ ಸರ್ಕಾರದ ಈ ದಲಿತ ವಿರೋಧಿ ನೀತಿಯನ್ನ ಖಂಡಿಸಿ ಬಿಜೆಪಿ ರಾಜ್ಯಾದ್ಯಂತ ಪ್ರತಿಭಟನೆ ಮಾಡಿದೆ. ಸದ್ಯ ಬಜೆಟ್ ಅಧಿವೇಶನದ ಕಲಾಪದಲ್ಲಿಯೂ ಈ ವಿಷಯ ಚರ್ಚೆಗೆ ಬಂದಿದೆ.

ಇದೇ ವಿಷಯವಾಗಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ನೀಡಿರುವ ಹೇಳಿಕೆ ಚರ್ಚೆಗೆ ಕಾರಣವಾಗಿದೆ. ಕೇಂದ್ರ ಸರ್ಕಾರವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಕಲ್ಯಾಣಕ್ಕೆ ಮೀಸಲಿಟ್ಟ ಹಣವನ್ನು ಬೇರೆ ಕೆಲಸಕ್ಕೆ ಬಳಕೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ.

ಮುಂದುವರಿದು, ಎಸ್‌ಸಿಪಿ, ಟಿಎಸ್‌ಪಿ ಅನುದಾನವನ್ನು ಯಾವೆಲ್ಲ ಕೆಲಸಗಳಿಗೆ ಬಳಕೆ ಮಾಡಿಕೊಂಡಿದ್ದಾರೆ ಎನ್ನುವ ಟಿಪ್ಪಣಿಯನ್ನು ನೀಡಿದ್ದಾರೆ. ದೇಶದ ಇನ್ನಿತರ ರಾಜ್ಯಗಳಲ್ಲಿ ದಲಿತರ ಕಲ್ಯಾಣಕ್ಕೆ ಮೀಸಲಿಟ್ಟ ಹಣ ಹೇಗೆಲ್ಲ ಬಳಕೆಯಾಗಿದೆ ಎನ್ನುವುದನ್ನು ವಿವರಿಸಿದ್ದಾರೆ.

ಆ ಮೂಲಕ ಸಚಿವ ಪ್ರಿಯಾಂಕ್ ಖರ್ಗೆ, ತಮ್ಮ ಸರ್ಕಾರದ ನಡೆಯನ್ನ ಸಮರ್ಥಿಸಿಕೊಂಡಿದ್ದಾರೆ. ಪ್ರಿಯಾಂಕ್ ಖರ್ಗೆ ಒಬ್ಬ ದಲಿತರಾಗಿ, ದಲಿತರ ಕಲ್ಯಾಣಕ್ಕೆ ಇನ್ನಷ್ಟು ಹೆಚ್ಚು ಅನುದಾನ ಮೀಸಲಿಡುವ ಬಗ್ಗೆ ಚರ್ಚೆ ಮಾಡಬೇಕಿತ್ತು.

ಕೇಂದ್ರ ಸರ್ಕಾರ ದಲಿತರಿಗೆ ಅನ್ಯಾಯ ಮಾಡಿದೆ ಎಂದರೆ, ರಾಜ್ಯ ಕಾಂಗ್ರೆಸ್ ಸರ್ಕಾರವು ಅದನ್ನೇ ಮಾಡಿದರೆ, ಮನುವಾದಿಗಳು ಮತ್ತು ಜಾತ್ಯಾತೀತವಾದಿಗಳ ನಡುವೆ ವ್ಯತ್ಯಾಸವೇ ಇರುವುದಿಲ್ಲ. ಪ್ರಸಕ್ತ ಬಜೆಟ್ಟಲ್ಲಾದರೂ ದಲಿತರ ಕಲ್ಯಾಣಕ್ಕೆ ವಿಶೇಷ ಅನುದಾನ ಒದಗಿಸುವ ನಿಟ್ಟಿನಲ್ಲಿ ಖರ್ಗೆ ಪ್ರಯತ್ನ ನಡೆಸಲಿ. ಯಾವುದೇ ಕಾರಣಕ್ಕೂ ದಲಿತರ ಅನುದಾನವನ್ನ ಬೇರೆ ಕೆಲಸಗಳಿಗೆ ಬಳಕೆ ಮಾಡಿಕೊಳ್ಳದಂತೆ ನಿರ್ಬಂಧಿಸುವ ಕೆಲಸವು ಆಗಲಿ.

### ಹುಲಕೋಟಿ ಕೆ.ಎಚ್. ಪಾಟೀಲ ಗ್ರಾಮೀಣ ಆಸ್ಪತ್ರೆಯ ಕಿಡ್ನಿ ಕಸಿಗೆ ಈಗ ವಿದೇಶಿ ವೈದ್ಯರ ಸಾಥ್

# ಗ್ರಾಮೀಣ ಆಸ್ಪತ್ರೆಯಲ್ಲಿ ಮೊದಲ ವಿಶೇಷ ಸೇವೆ

ಗದಗ ಜಿಲ್ಲೆಯ ಹುಲಕೋಟಿಯ ಕೆ.ಎಚ್. ಪಾಟೀಲ್ ಗ್ರಾಮೀಣ ಆಸ್ಪತ್ರೆ ನಾಲ್ಕು ಬಾರಿ ಯಶಸ್ವಿ ಮೂತ್ರಪಿಂಡ ಕಸಿ ಮಾಡಿದ ನಂತರ ದೇಶ ವಿದೇಶಗಳಲ್ಲಿ ಸದ್ದು ಮಾಡುತ್ತಿದೆ. ಯುನೈಟೆಡ್ ಕಿಂಗ್‌ಡಮ್ ಮತ್ತು ಯುಎಸ್‌ಎ ವೈದ್ಯರು ಇದೀಗ ಗದಗ ಗ್ರಾಮೀಣ ರೋಗಿಗಳೊಂದಿಗೆ ಉಚಿತವಾಗಿ ಸಮನ್ವಯ ಸಾಧಿಸಲು ಒಪ್ಪಿಕೊಂಡಿದ್ದಾರೆ ಮತ್ತು ಈಗ ರೋಗಿಗಳು ಗದಗ ಗ್ರಾಮದಲ್ಲಿ ವಿದೇಶಿ ವೈದ್ಯರಿಂದ ಉಚಿತ ಸಮಾಲೋಚನೆ ಮತ್ತು ಸಲಹೆಯನ್ನು ಪಡೆಯಬಹುದಾಗಿದೆ.



ಗದಗ ಸಮೀಪದ ಹುಲಕೋಟಿ ಗ್ರಾಮದಲ್ಲಿರುವ ಕೆ.ಎಚ್. ಪಾಟೀಲ್ ಗ್ರಾಮೀಣ ಆಸ್ಪತ್ರೆಯೊಂದಿಗೆ ದೀರ್ಘಾವಧಿಯ ಸಮನ್ವಯಕ್ಕೆ ವಿದೇಶಿ ಶಸ್ತ್ರಚಿಕಿತ್ಸಕರು ಒಪ್ಪಿಗೆ ನೀಡಿದ್ದಾರೆ. ಅನೇಕ ಗ್ರಾಮೀಣ ರೋಗಿಗಳು ಮೂತ್ರಪಿಂಡ ಕಸಿ ಮಾಡಲು ದೊಡ್ಡ ನಗರಗಳು ಅಥವಾ ಪಟ್ಟಣಗಳಿಗೆ ಭೇಟಿ ನೀಡಿದರೆ ಲಕ್ಷ ಲಕ್ಷ ಬಿಲ್ ಹಾಗೂ ದುಬಾರಿ ಚಿಕಿತ್ಸೆಗಳು ಅವರನ್ನು ಭಯಭೀತಗೊಳಿಸುತ್ತವೆ. ಈಗ ಈ ಗ್ರಾಮೀಣ ಆಸ್ಪತ್ರೆಯು ಸಾಮಾನ್ಯ ಜನರಿಗೆ ಕೈಗೆಟುಕುವಂತಿದೆ. ಇದೇ ಮೊದಲ ಬಾರಿಗೆ ಗ್ರಾಮೀಣ ಆಸ್ಪತ್ರೆಯು ಅಂತಾರಾಷ್ಟ್ರೀಯ ವೈದ್ಯರಿಂದ ಉಚಿತ, ಅಮೂಲ್ಯವಾದ ಸಲಹೆ ಪಡೆಯುತ್ತಿದೆ. ಅದು ಗದಗ ಜಿಲ್ಲೆಯ ಹುಲಕೋಟಿ ಆಸ್ಪತ್ರೆ ಎಂಬುದು ನಮ್ಮೆಲ್ಲರಿಗೂ ಹೆಮ್ಮೆಯ ವಿಷಯ.



ಹುಲಕೋಟಿ ಗ್ರಾಮದ ಗ್ರಾಮೀಣ ವೈದ್ಯಕೀಯ ಸೇವೆಗಳ ಕೆ.ಎಚ್. ಪಾಟೀಲ್ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಏಪ್ರಿಲ್ 24ರಂದು ಮೊದಲ ಯಶಸ್ವಿ ಮೂತ್ರಪಿಂಡ ಕಸಿ ಆಪರೇಷನ್ ನಡೆಯಿತು. ಈಗ ದಾನಿಗಳು ಮತ್ತು ಸ್ವೀಕರಿಸುವವರು ಇಬ್ಬರೂ ಆರೋಗ್ಯವಾಗಿದ್ದಾರೆ. ನಾಲ್ಕನೇ ಕಸಿ ಆಪರೇಷನ್ ಈ ತಂಡಕ್ಕೆ ಬಹಳ ವಿಶೇಷವಾಗಿತ್ತು. ಏಕೆಂದರೆ ಯುಕೆ ಲಿವರ್‌ಪೂಲ್‌ನ ಡಾ. ಅಜಯ್ ರಾವ್ ಹುಲಕೋಟಿ ವೈದ್ಯರ ತಂಡಕ್ಕೆ ಉಚಿತವಾಗಿ ಸಹಾಯ ಮಾಡಿದರು.

ನಾಲ್ಕನೆಯ ಕಿಡ್ನಿ ಕಸಿಗೆ ದಾನ ಮಾಡಿದ ಎಪ್ಪತ್ತರ ವಯೋಮಾನದ ಮಹಿಳೆ 'ಬೆಂಗಳೂರು ಅಥವಾ ಬೇರೆ ದೊಡ್ಡ ದೊಡ್ಡ ನಗರಗಳಲ್ಲಿ ಹೋದರೆ ಇರುವುದಕ್ಕೆ, ಊಟ-ತಿಂಡಿ ಹೀಗೆ ಆಪರೇಷನ್‌ಗಿಂತ ಇತರೆ ಖರ್ಚು-ವೆಚ್ಚಗಳೇ ಲಕ್ಷಗಳಷ್ಟಾಗುತ್ತವೆ. ಹೀಗಿರುವಾಗ ಗದುಗಿನ ಹತ್ತಿರದ ಹುಲಕೋಟಿಯಲ್ಲಿ ತಜ್ಞ ವೈದ್ಯರು ಇರುವುದರಿಂದ ನಮಗೆ ನಿಜವಾಗಲೂ ಉತ್ತಮ ಚಿಕಿತ್ಸೆ ಸಿಕ್ಕಿದ್ದು, ಈಗ ನಾನೂ ಚೆನ್ನಾಗಿದ್ದೇನೆ, ನನ್ನ ಮಗನೂ ಚೆನ್ನಾಗಿದ್ದಾನೆ' ಎನ್ನುತ್ತಾರೆ.

ಡಾ. ಅವಿನಾಶ್ ಓದುಗೌಡರ್ ಅವರು ಕನ್ಸಲ್ಟೆಂಟ್ ಮೂತ್ರಶಾಸ್ತ್ರಜ್ಞರಾಗಿದ್ದು, ಅವರು ಕೆಎಂಸಿ ಮಣಿಪಾಲದಲ್ಲಿ ಮೂತ್ರಶಾಸ್ತ್ರದಲ್ಲಿ ತರಬೇತಿಯನ್ನು ಪೂರೈಸಿದ್ದಾರೆ ಮತ್ತು ನಂತರ ಲಿವರ್‌ಪೂಲ್‌ನಿಂದ ಮೂತ್ರಪಿಂಡ ಕಸಿ ಮತ್ತು ಯುನೈಟೆಡ್ ಕಿಂಗ್‌ಡಂನ ಲೀಡ್ಸ್‌ನಿಂದ ಯುರೋ-ಆಂಕೊಲಾಜಿಗಾಗಿ ರೋಬೋಟಿಕ್ ಸರ್ಜರಿಯಲ್ಲಿ ಫೆಲೋಶಿಪ್ ಪಡೆದರು. ಅವರು ತಮ್ಮ ಜನರಿಗೆ ಸೇವೆ ಸಲ್ಲಿಸುವ ಉದ್ದೇಶದಿಂದ ತಮ್ಮ ಗ್ರಾಮವಾದ ಹುಲಕೋಟಿಗೆ ಮರಳಿದರು. ಮೂತ್ರಪಿಂಡ ಕಸಿಯು ಜನಸಾಮಾನ್ಯರಿಗೆ ಕೈಗೆಟುಕುವ ಹಾಗೆ ಮಾಡಬೇಕೆಂಬ ಹಂಬಲ ಇವರದು. ಡಾ. ದೀಪಕ್ ಕುರಹಟ್ಟಿ ಅವರು ಸಮಾಲೋಚಕ ನೆಫ್ರಾಲಜಿಸ್ಟ್ ಮತ್ತು ಕಸಿ ವೈದ್ಯರಾಗಿದ್ದಾರೆ, ಅವರು ಬೆಂಗಳೂರಿನ ಅಪೋಲೋ ಆಸ್ಪತ್ರೆಗಳಲ್ಲಿ ತಮ್ಮ ತರಬೇತಿಯನ್ನು ಪಡೆದಿದ್ದಾರೆ.

ತಂಡದಲ್ಲಿ ಡಾ. ಭುವನೇಶ ಆರಾಧ್ಯ, ಡಾ. ಪವನ್ ಕೋಳಿವಾಡ, ಡಾ. ಸಮೀರ್ ದೇಸಾಯಿ, ಡಾ. ಮೇಘನಾ ಹಿಪ್ಪರಗಿ, ಡಾ. ವಿಶಾಲ್ ಕೆ, ಡಾ. ವಿನಾಯಕ ಪಂಚಗಾರ ಇದ್ದಾರೆ. ಈ ಅಂತಾರಾಷ್ಟ್ರೀಯ ಮನ್ನಣೆಗೆ ಕಾರಣರಾದ ಎಲ್ಲಾ ವೈದ್ಯರಿಗೆ ಆಸ್ಪತ್ರೆಯ ಕಾರ್ಯದರ್ಶಿ ಡಾ.ವೇಮನ್ ಸಾಹುಕಾರ ಅಭಿನಂದನೆ ಸಲ್ಲಿಸಿದ್ದಾರೆ.

ಆರ್‌ಎಂಎಸ್‌ಎಸ್‌ನ ಅಧ್ಯಕ್ಷ ಡಾ. ಎಸ್.ಆರ್. ನಾಗನೂರ್ ಈ ಬಗ್ಗೆ ಮಾತನಾಡಿ, 'ಈಗ ಕ್ಯಾಲಿಫೋರ್ನಿಯಾ ವಿಶ್ವವಿದ್ಯಾಲಯ (ಲಾಸ್ ಏಂಜಲೀಸ್) ಮತ್ತು ಯುಕೆ ಪರಿಣಿತ ವೈದ್ಯರು ಕಸಿಗೆ ಬರುವ ರೋಗಿಗಳಿಗೆ ಸಲಹೆ ನೀಡುತ್ತಿದ್ದಾರೆ. ಇದು ಕರ್ನಾಟಕದ ಗ್ರಾಮೀಣ ಆಸ್ಪತ್ರೆಯಲ್ಲಿ ಲಭ್ಯವಿರುವ ಮೊದಲ ವಿಶೇಷ ಸೇವೆಯಾಗಿದೆ' ಎಂದಿದ್ದಾರೆ.

ಡಾ. ಪ್ಯಾರಾಅಲಿ ನೂರಾನಿ ಅವರು ಅಮೇರಿಕ ವೈದ್ಯರೊಂದಿಗೆ ಮಾತನಾಡಿ, ಹುಲಕೋಟಿ ಆಸ್ಪತ್ರೆಯಲ್ಲಿ ಕಿಡ್ನಿ ಕಸಿ ಬಗ್ಗೆ ತಿಳಿಸಿದಾಗ ಅಲ್ಲಿಯ ವೈದ್ಯರೂ ಕೂಡ ಈ ಕಾರ್ಯದಲ್ಲಿ ಕೈಜೋಡಿಸಲು ಸಿದ್ಧರಾಗಿದ್ದು, ಹುಲಕೋಟಿ ಕೆ.ಎಚ್. ಪಾಟೀಲ್ ಸಂಶೋಧನಾ ಸಂಸ್ಥೆ ಹಾಗೂ ಆಸ್ಪತ್ರೆಗೆ ಮತ್ತೊಂದು ಗರಿ ಬಂದಂತಾಗಿದೆ.

– ಶ್ರೀಕಾಂತ ಕೊಪ್ಪರ.
ತೆರಿಗೆ ಸಲಹೆಗಾರರು, ಗದಗ.

# ಕಲಾವಿದ ಗವಿಶಿದ್ಧಯ್ಯರಿಗೆ ಪ್ರಶಸ್ತಿ



■ ವಿಜಯಸಾಕ್ಷಿ ಸುದ್ದಿ, ಗದಗ

ಬಾಗಲಕೋಟೆ ಜಿಲ್ಲೆಯ ಹುನಗುಂದ ತಾಲೂಕಿನ ಹಿರೇಮಾಗಿ ಗ್ರಾಮದಲ್ಲಿ ಶ್ರೀ ರಾಮಲಿಂಗೇಶ್ವರ ಜಾತ್ರಾ ಮಹೋತ್ಸವ ಹಾಗೂ ಲಘು ರಥೋತ್ಸವ ಕಾರ್ಯಕ್ರಮದ ಅಂಗವಾಗಿ ಶ್ರೀ ರಾಮಲಿಂಗೇಶ್ವರ ಸಾಂಸ್ಕೃತಿಕ ಕಲಾವಿದರ ಸಂಘ ಹಿರೇಮಾಗಿ ಸಂಘ ಇವರು ಕೊಡಮಾಡುವ 2025ನೇ ಸಾಲಿನ ಮೊಗ್ಗಿಮಯಾದೇವರ ಪ್ರಶಸ್ತಿಯನ್ನು ಸಮಾಜಿಕ ಹೋರಾಟಗಾರ, ಜನಪದ ಕಲಾವಿದ ಗವಿಶಿದ್ಧಯ್ಯ ಹಳ್ಳಿಕೇರಿಮಠರಿಗೆ ಪ್ರದಾನ ಮಾಡಲಾಯಿತು.

ಈ ಸಂದರ್ಭದಲ್ಲಿ ವಿಜಯಪುರ ಜಿಲ್ಲೆಯ ಕೂಡಲಗಿ ಸಂಸ್ಥಾನ ಹಿರೇಮಠದ ಶ್ರೀ ಜಗದ್ಗುರು ಡಾ. ಪ್ರಶಾಂತ ಸಾಗರ ಶಿವಾಚಾರ್ಯ ಸ್ವಾಮಿಗಳು, ಪುರತಗೇರಿ ಹಿರೇಮಠದ ಶ್ರೀ ಷ.ಬ್ರ. ಅಭಿನವ ಕೈಲಾಸಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು, ವೇ.ಮೂ. ನಾಗರಾಜ ಹೀರೆಮಠ, ಶ್ರೀ ಚನ್ನಬಸಪ್ಪ ಅಜ್ಜನವರು, ಶ್ರೀ ಕೆಂಚಪ್ಪ ಅಜ್ಜನವರು, ಶ್ರೀ ಪ್ರಾಣೇಶ ಅಜ್ಜನವರು, ಶ್ರೀ ಕೃಷ್ಣಾ ಅಜ್ಜನವರು, ನಾಗಣ್ಣ ಬಾದವಾಡಗಿ, ಯಮನಪ್ಪ ಎಮ್ಮೆಟ್ಟಿ, ಹನುಮಂತ ಎಮ್ಮೆಟ್ಟಿ, ಮುತ್ತು ವಡ್ಡರ, ರಮನಗೌಡ ಕೆಸರಪೆಂಟಿ, ನೀಲ್ಲಪ್ಪ ತೆಗ್ಗಿ ಮುಂತಾದವರು ಪಾಲ್ಗೊಂಡಿದ್ದರು.

# ಶಶಿಕಲಾರಿಗೆ 'ಸಾವಿತ್ರಿಬಾಯಿ ಫುಲೆ' ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಪಟ್ಟಣದ ನಿವಾಸಿ, ನರಗುಂದ ತಾಲೂಕಿನ ಸುರಕೋಡ ಗ್ರಾಮದ ಪ್ರಾಥಮಿಕ ಶಾಲಾ ಶಿಕ್ಷಕಿ ಶಶಿಕಲಾ ಕುಲಕರ್ಣಿಯವರಿಗೆ ಸಾವಿತ್ರಿಬಾಯಿ ಫುಲೆ ಪ್ರಶಸ್ತಿ ದೊರಕಿದೆ. ಬೆಂಗಳೂರಿನಲ್ಲಿ ಈಚೆಗೆ ಜರುಗಿದ ಸಮಾರಂಭದಲ್ಲಿ ಅವರು ಈ ಪ್ರಶಸ್ತಿಯನ್ನು ಸ್ವೀಕರಿಸಿದರು.

ಕತೆ, ಕವನ, ಹನಿಗನವಗಳ ರಚನೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವ ಶಿಕ್ಷಕಿ ಶಶಿಕಲಾ ಒಬ್ಬ ಉತ್ತಮ ಭಾಷಣಗಾರ್ತಿಯೂ ಆಗಿದ್ದಾರೆ. ಈಗಾಗಲೇ ನಾಡಿನ ಹಲವಾರು ಕಡೆಗಳಲ್ಲಿ ನಡೆದಿರುವ ಜಿಲ್ಲಾ ಮತ್ತು ರಾಜ್ಯಮಟ್ಟದ ಕವಿಗೋಷ್ಠಿಗಳಲ್ಲಿ ಕವನ ವಾಚಿಸಿ ಸೈ ಎನ್ನಿಸಿಕೊಂಡಿರುವುದಲ್ಲದೆ ಅನೇಕ ಪ್ರಶಸ್ತಿ, ಬಹುಮಾನಗಳಿಗೂ ಶಶಿಕಲಾ ಭಾಜನರಾಗಿದ್ದಾರೆ.

ತಮ್ಮ ಈ ಸಾಧನೆಗೆ ಪತಿ ಹೊಂಬಳ ಶಂಕರಲಿಂಗ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಸುನಿಲ ಅಂಬೇಕರ ಮತ್ತು ಸಹೋದ್ಯೋಗಿಗಳ ಸಹಕಾರ, ಬೆಂಬಲವೇ ಕಾರಣ ಎನ್ನುವ ಶಿಕ್ಷಕಿ ಶಶಿಕಲಾ, ಮುಂದೊಂದು ದಿನ ಉತ್ತಮ ಕವಿಯಿತ್ರಿಯಾಗುವ ವಿಶ್ವಾಸ ಹೊಂದಿದ್ದಾರೆ. ಶಿಕ್ಷಕಿ ಶಶಿಕಲಾರ ಸಾಧನೆಗೆ ಪಟ್ಟಣದ ಶ್ರೀ ದತ್ತ ಭಕ್ತ ಮಂಡಳಿಯ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ ಮತ್ತು ಬ್ರಹ್ಮ ಸಮಾಜ ಅಭಿನಂದನೆ ಸಲ್ಲಿಸಿದೆ.

### ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಸತಿ ನಿಲಯದ ವಿದ್ಯಾರ್ಥಿಗಳು ಸಿದ್ಧರಾಗಿ | ಜಿಲ್ಲಾಧಿಕಾರಿ ದಿವ್ಯ ಪ್ರಭು ಕರೆ

# ಯುವ ಜನತೆಯಲ್ಲಿ ಸಾಧನೆಯ ಛಲವಿರಲಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ




ಪದವಿ ಹಂತದಲ್ಲಿಯೇ ಯುವಕ, ಯುವತಿಯರು ಐಎಎಸ್, ಐಪಿಎಸ್‌ನಂತಹ ಪರೀಕ್ಷೆಗಳಿಗೆ ಸಿದ್ಧತೆ ಆರಂಭಿಸಬೇಕು. ವಿವಿಧ ಇಲಾಖೆಗಳ ವಸತಿ ನಿಲಯಗಳಲ್ಲಿ ಇರುವ ವಿದ್ಯಾರ್ಥಿಗಳು ಯುವ ಚೇತನದಲ್ಲಿ ಭಾಗವಹಿಸಿ, ಸಾಧಿಸುವ ಛಲದಿಂದ ಪ್ರತಿಜ್ಞೆ ಮಾಡಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಮಂಗಳವಾರ ಬೆಳಿಗ್ಗೆ ಕೆಸಿಡಿ ಆವರಣದಲ್ಲಿರುವ ಸೃಜನಾ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳು ಸಂಯುಕ್ತವಾಗಿ ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಪೂರ್ವಸಿದ್ಧತೆ ಕುರಿತು ಆರಂಭವಾಗಿರುವ ಯುವ ಚೇತನ ಉದ್ಘಾಟನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪದವಿ ಶಿಕ್ಷಣದ ಹಂತ ಜೀವನದಲ್ಲಿ ಬಹು ಮುಖ್ಯವಾದ ಕಾಲಘಟ್ಟ. ವಿದ್ಯಾರ್ಥಿಗಳು ಓದು, ಸಾಧನೆ ಬಿಟ್ಟು ಬೇರೆಡೆ ಚಿಂತಿಸಬಾರದು. ಜೀವನದ ಗುರಿ ತಲುಪಿದಾಗ ನೆಮ್ಮದಿ ಸಿಗುತ್ತದೆ. ವಿದ್ಯಾರ್ಥಿಗಳಲ್ಲಿ ಮುನ್ನುಗ್ಗುವ, ಸಾಧನೆ ಮಾಡುವ ಹಠ, ಛಲ ಇರಬೇಕೆಂದು ಜಿಲ್ಲಾಧಿಕಾರಿ ದಿವ್ಯಪ್ರಭು ಹೇಳಿದರು.

ಪ್ರತಿ ತಿಂಗಳು ಯುವಚೇತನ ಕಾರ್ಯಕ್ರಮದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ವಿಷಯ ತಜ್ಞರು, ತರಬೇತಿದಾರರು ಮತ್ತು ಹಿರಿಯ ಅಧಿಕಾರಿಗಳು ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸಗಳ ಮೂಲಕ ಮಾಹಿತಿ ನೀಡಲಿದ್ದಾರೆ. ವಸತಿ ನಿಲಯಗಳಲ್ಲಿ ಬಡ, ಮಧ್ಯಮ ಕುಟುಂಬದ ವಿದ್ಯಾರ್ಥಿಗಳು ಹೆಚ್ಚಾಗಿ ಇರುವದರಿಂದ ಅವರಿಗೆ ಉತ್ತಮ ತರಬೇತಿ ನೀಡುವ ಉದ್ದೇಶದಿಂದ ಉಚಿತವಾಗಿ ಈ ಯುವ ಚೇತನ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದರು.

ಯುವ ಚೇತನ ಉದ್ಘಾಟಿಸಿದ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅಭ್ಯರ್ಥಿಗಳು ಸ್ವಯಂ ನಿರ್ಧಾರ ಮತ್ತು ದೃಢತೆಯಿಂದ ಸಿದ್ಧರಾಗಬೇಕು. ಪರೀಕ್ಷಾ ಸಿದ್ಧತೆ ಆರಂಭದಿಂದ ವ್ಯವಸ್ಥಿತವಾಗಿ ಆಗಬೇಕು. ಇನ್ನೊಬ್ಬರನ್ನು ನೋಡಿ, ಬರಿ ಆಸೆ ಪಟ್ಟು ಬರೆಯುವ ಪರೀಕ್ಷೆ ಅಲ್ಲ. ಆತ್ಮವಿಶ್ವಾಸ ಮತ್ತು ಕಠಿಣ ಪರಿಶ್ರಮ ಮುಖ್ಯವಾಗಿದೆ ಎಂದು ತಿಳಿಸಿದರು.

ಐಎಎಸ್, ಐಪಿಎಸ್ ಪರೀಕ್ಷೆಗಳ ಸಿದ್ಧತೆ ಕುರಿತು ತಮ್ಮ ಅನುಭವಗಳೊಂದಿಗೆ ವಿವರಿಸಿದರು. ವರ್ಷದಿಂದ ವರ್ಷಕ್ಕೆ ಸ್ಪರ್ಧೆ ಹೆಚ್ಚುತ್ತಿದ್ದು, ವಿದ್ಯಾರ್ಥಿಗಳು ದೃಢವಿಶ್ವಾಸದಿಂದ ಪರೀಕ್ಷೆಗಳಿಗೆ ಸಿದ್ಧರಾಗಬೇಕೆಂದು ಹೇಳಿದರು.

ನಂತರ ಪ್ರಸಿದ್ಧ ಪ್ರೇರಣಾ ಭಾಷಣಕಾರ ಪ್ರದೀಪ್ ಆಚಾರ್ಯ, ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿದಾರ ಗುರುರಾಜ ಬುಲಬಲೆ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ವಿಶೇಷ ಉಪನ್ಯಾಸ ನೀಡಿದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಶುಭ ಪಿ ಸ್ವಾಗತಿಸಿದರು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಗೋಪಾಲ ಲಮಾಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಗಂಗಾಧರ ದೊಡ್ಡಮನಿ ವಂದಿಸಿದರು.

ಯುವ ಚೇತನ ಕಾರ್ಯಾಗಾರದಲ್ಲಿ ವಿವಿಧ ಇಲಾಖೆಗಳ ವಸತಿ ನಿಲಯಗಳ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ನಿಲಯಪಾಲಕರು ಭಾಗವಹಿಸಿದ್ದರು.

# ಎಸ್.ಎಸ್.ಕೆ. ಅಭಿವೃದ್ಧಿ ನಿಗಮ ಮಂಡಳಿ ಸ್ಥಾಪನೆಗೆ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸೋಮವಂಶ ಸಹಸ್ರಾರ್ಜುನ ಕ್ಷತ್ರಿಯ ಸಮಾಜದ ಗದಗ ಜಿಲ್ಲಾ ಅಧ್ಯಕ್ಷ ಪಿ.ಎಚ್. ಕಬಾಡಿಯವರ ನೇತೃತ್ವದಲ್ಲಿ ಸಮಾಜಕ್ಕೆ ಅಭಿವೃದ್ಧಿ ಮಂಡಳಿ ಸ್ಥಾಪಿಸಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಿಗೆ ಮನವಿ ಸಲ್ಲಿಸಲಾಯಿತು.

ಗದಗ ಜಿಲ್ಲಾಧ್ಯಕ್ಷ ಪಿ.ಎಚ್. ಕಬಾಡಿ ಮನವಿಯನ್ನು ಓದಿ, ನಮ್ಮ ಎಸ್.ಎಸ್.ಕೆ. ಸಮಾಜದ ಕುಲಪುರುಷ ಶ್ರೀ ಸಹಸ್ರಾರ್ಜುನ ಮಹಾರಾಜರು ಇವರು ಸುದರ್ಶನ ಚಕ್ರದ ಅವತಾರ ಎಂಬುವುದು ವೇದಪುರಾಣದಲ್ಲಿ ಉಲ್ಲೇಖವಿದೆ. ಸ್ವಾತಂತ್ರ್ಯ ಪೂರ್ವದಿಂದಲೂ ನೇಕಾರಿಕೆ, ಕೈಮಗ್ಗ, ರೇಷ್ಮೆಗೆ ಬಣ್ಣ ಹಾಕುವುದು ನಮ್ಮ ಹಿರಿಯರ ಕೈ ಕಸಬು ಆಗಿತ್ತು. ಬದಲಾದ ಪರಿಸ್ಥಿತಿಯಲ್ಲಿ ಕೈಮಗ್ಗಗಳು ಬಂದ್ ಆಗಿದ್ದು, ಚಿಕ್ಕಪುಟ್ಟ ವ್ಯಾಪಾರ ಈಗಿನ ನಮ್ಮ ಉಪಜೀವನವಾಗಿದೆ. ನಿಶ್ಚಿತ ಆದಾಯ ಇಲ್ಲದೇ ಇರುವುದರಿಂದ ಬಂದ ಆದಾಯದಲ್ಲಿಯೇ ಜೀವನ ನಡೆಸಬೇಕಿದೆ.

ನಮ್ಮ ಸಮಾಜದ ಮುಂದಿನ ಪೀಳಿಗೆಯ ಭವಿಷ್ಯ ಚಿಂತಾಜನಕವಾಗಿದೆ. ಮಕ್ಕಳಿಗೆ ವಿದ್ಯಾಭ್ಯಾಸ ನೀಡಲಾಗದೆ, ಚಿಕ್ಕಪುಟ್ಟ ಉದ್ಯೋಗ, ವ್ಯಾಪಾರ ಮಾಡುವುದಕ್ಕೆ ಬ್ಯಾಂಕುಗಳಲ್ಲಿ ಸಾಲ ಸಿಗದೇ ಫೈನಾನ್ಸ ಮತ್ತು ಸೊಸೈಟಿಗಳಲ್ಲಿ ಹೆಚ್ಚಿನ ಬಡ್ಡಿದರಕ್ಕೆ ಸಾಲ ಪಡೆಯುವದು ಅನಿವಾರ್ಯವಾಗಿದೆ. ಮಾನ್ಯ ಮುಖ್ಯಮಂತ್ರಿಗಳು ಹಾಗೂ ಸಂಬಂಧಪಟ್ಟ ಇಲಾಖೆಯವರು ನಮ್ಮ ಸಮಾಜದ ಅಭಿವೃದ್ಧಿಗಾಗಿ ಬೆನ್ನೆಲುಬಾಗಿ ನಿಲ್ಲಬೇಕು ಎಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಎಸ್.ಎಸ್.ಕೆ ಸಮಾಜ ಅಭಿವೃದ್ಧಿ ಹೋರಾಟ ಸಮಿತಿಯ ಪದಾಧಿಕಾರಿಗಳಾದ ಸಂಜೀವಕುಮಾರ ಖಟವಟೆ, ಶ್ರೀಕಾಂತ ರಾಯಬಾಗಿ, ಕಾಶಿನಾಥ ಸಿದ್ಲಿಂಗ, ಗುರುನಾಥಸಾ ಹಬೀಬ, ಫಕೀರಸಾ ಭಾಂಡಗೆ, ನಾಗರಾಜ ಪವಾರ, ಗದಗ ಎಸ್.ಎಸ್.ಕೆ ಮಹಿಳಾ ಮಂಡಳದ ಸದಸ್ಯರು ಹಾಗೂ ಸಮಾಜದ ಹಿರಿಯರು, ಯುವಕರು, ಮಹಿಳೆಯರು ಇದ್ದರು.

### ಮಕ್ಕಳ ಪತ್ಯಾಧಾರಿತ ನಾಟಕೋತ್ಸವ ಉದ್ಘಾಟಿಸಿದ ರಂಗಾಯಣದ ನಿರ್ದೇಶಕ ಡಾ. ರಾಜು ತಾಳಿಕೋಟಿ

# ವಿದ್ಯಾರ್ಥಿ ಜೀವನದಲ್ಲಿ ರಂಗಭೂಮಿ ಬೆಳಕಾಗಿದೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೇವಲ ಶುಷ್ಕವಾದ ಬೋಧನೆಯಾಗದೇ ಕಲಿಕೆಯಲ್ಲಿ ಗುಣಾತ್ಮಕತೆಯನ್ನು ನಾಟಕಗಳು ಒದಗಿಸುತ್ತವೆ. ಒಂದು ಪಾಠವನ್ನು ನಾಟಕಕ್ಕೆ ಅಳವಡಿಸಿ ರಂಗಕ್ಕೆ ತಂದಾಗ ವಿಷಯ ಹೆಚ್ಚು ಮನದಟ್ಟಾಗುತ್ತದೆ. ಮಕ್ಕಳು ತಾವು ಅಭಿನಯಿಸಿದ ಪಾತ್ರವನ್ನು ಜೀವನದುದ್ದಕ್ಕೂ ನೆನಪಿಡುತ್ತಾರೆ. ರಂಗಭೂಮಿ ಮಕ್ಕಳ ಬಾಳು ಬೆಳಗುತ್ತಿದೆ ಎಂದು ರಂಗಾಯಣ ನಿರ್ದೇಶಕರಾದ ಡಾ. ರಾಜು ತಾಳಿಕೊಟಿ ಅಭಿಪ್ರಾಯಪಟ್ಟರು.

ಧಾರವಾಡದ ಡೆಪ್ಯೂಟಿ ಚೆನ್ನಬಸಪ್ಪ ಪ್ರಾಥಮಿಕ ಶಿಕ್ಷಣ ಪ್ರತಿಷ್ಠಾನವು ಧಾರವಾಡ ರಂಗಾಯಣದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 30ನೇ ಪತ್ಯಾಧಾರಿತ ಮಕ್ಕಳ ನಾಟಕೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.




ಮಕ್ಕಳಿಗೆ ಬಾಲ್ಯದಲ್ಲಿಯೇ ನಾಟಕ ಕಲೆ ಕರಗತ ಮಾಡಿಸಬೇಕು. ಮಕ್ಕಳಿಗೆ ಕಲೆ, ಸಂಗೀತ, ಸಾಹಿತ್ಯದ ಅರಿವು ಅವಶ್ಯಕ. ಇದು ಅವರ ಸರ್ವಾಂಗೀಣ ವ್ಯಕ್ತಿತ್ವ ಅರಳಲು ಸಾಧ್ಯವಾಗುವದು. ಪ್ರತಿಷ್ಠಾನವು ನಾಟಕೋತ್ಸವನ್ನು ನೂರ್ಕಾಲ ಮುಂದುವರೆಸಿಕೊಂಡು ಬರಲಿ ಎಂದು ಹಾರೈಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಮಾತನಾಡಿ, ಮೂವತ್ತು ವರ್ಷದ ಪತ್ಯಾಧಾರಿತ ಮಕ್ಕಳ ನಾಟಕೋತ್ಸವ ಪಯಣ ಒಂದು ದಾಖಲೆಯೇ ಸರಿ. ಇದು ನಿರಂತರವಾಗಿ ಮುಂದುವರೆಯಲು ಯುವ ಶಿಕ್ಷಕರು ತೊಡಗಿಸಿಕೊಳ್ಳಬೇಕು. ಆ ದಿಶೆಯಲ್ಲಿ ರಂಗಾಯಣ ಯುವ ಶಿಕ್ಷಕರಿಗೆ ಒಂದು ತರಬೇತಿ ಯೋಜನೆಯನ್ನು ರೂಪಿಸಿ ಶಿಬಿರಗಳನ್ನು ಆಯೋಜಿಸಲಿ ಎಂದು ಸಲಹೆ ನೀಡಿದರು.

ನಾಟಕೋತ್ಸವದ ಸಂಯೋಜಕರಾದ ಕೆ.ಎಚ್. ನಾಯಕ ಪ್ರಾಸ್ತಾವಿಕವಾಗಿ ಮಾತನಾಡಿ, ಸುದೀರ್ಘ ಕಾಲ ಈ ನಾಟಕೋತ್ಸವ ನಡೆಸಲು ಸಹಕರಿಸಿದ ಶಿಕ್ಷಕ ಸಮೂಹಕ್ಕೆ ಅಭಿನಂದಿಸಿದರು. ಶಿಕ್ಷಣ ಚಿಂತಕರಾದ ಎಮ್.ಎಮ್. ಚಿಕ್ಕಮಠ ಸ್ವಾಗತಿಸಿದರು. ಹಿರಿಯರಾದ ನಿಂಗಣ್ಣ ಕುಂಟಿ, ಎಸ್.ಎಂ. ದಾನಪ್ಪಗೌಡರ, ಬಿ.ಜಿ. ಬಾರಕಿ, ಡಾ. ಕುಮುದ್ವತಿ ಭರಮಗೌಡರ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರತಿಷ್ಠಾನದ ಅಧ್ಯಕ್ಷರಾದ ಎಸ್.ಬಿ. ಕೊಡ್ಲಿ ಮಾತನಾಡಿ, ದತ್ತಿದಾನಿಗಳು ನೆರವಿನಿಂದ ನಾಟಕೋತ್ಸವ ನಿರಂತರವಾಗಿ ನಡೆದುಕೊಂಡು ಬಂದಿದೆ. ಎಲ್ಲ ನಾಟಕ ತಂಡಗಳಿಗೆ ಪ್ರೋತ್ಸಾಹ ಧನ ನೀಡಲಾಗುತ್ತದೆ. ಮುಂದಿನ ವರ್ಷದಿಂದ ಪ್ರೋತ್ಸಾಹಧನ ಹೆಚ್ಚಿಸುವ ಯೋಜನೆ ಹೊಂದಿದ್ದೇವೆ. ದತ್ತಿದಾನಿಗಳು ಮಕ್ಕಳ ಕಲೆಯನ್ನು ಪ್ರೋತ್ಸಾಹಿಸುವ ಈ ಯೋಜನೆಗೆ ಕೈಜೋಡಿಸಿಬೇಕು ಎಂದರು.

ಶಿಕ್ಷಕ, ಸಾಹಿತಿ ಡಾ. ಲಿಂಗರಾಜ ರಾಮಾಪೂರ ಕಾರ್ಯಕ್ರಮ ನಿರ್ವಹಿಸಿದರು. ಪ್ರಮಿಳಾ ಜಕ್ಕಣ್ಣವರ ವಂದಿಸಿದರು. ಉದ್ಘಾಟನೆಯ ನಂತರ ಧಾರವಾಡ ಜಿಲ್ಲೆಯ ವಿವಿಧ ಶಾಲೆಗಳ ಮಕ್ಕಳಿಂದ 12 ನಾಟಕಗಳು ಪ್ರದರ್ಶನಗೊಂಡವು.

# ಆಸ್ತಿ ಮಾಲೀಕರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗಜೇಂದ್ರಗಡ ಪುರಸಭೆ ವ್ಯಾಪ್ತಿಯಲ್ಲಿ ಅಧಿಕೃತ , ಅನಧಿಕೃತ ಕಟ್ಟಡಗಳ ಹಾಗೂ ನಿವೇಶನಗಳಿಗೆ ಎ ಖಾತೆ ಮತ್ತು ಬಿ ಖಾತೆ ನೀಡುವ ಕುರಿತು ಮೇ 10 ರವರೆಗೆ ಇ – ಖಾತಾ ಆಂದೋಲನ ಹಮ್ಮಿಕೊಂಡಿದೆ. ಪಟ್ಟಣದಲ್ಲಿನ ಆಸ್ತಿ ಮಾಲೀಕರು ತಮ್ಮ ಕಟ್ಟಡ– ನಿವೇಶನಗಳಿಗೆ ಸಂಬಂಧಿಸಿದ ದಾಖಲಾತಿ ಪತ್ರಗಳನ್ನು ಕಚೇರಿಗೆ ಸಲ್ಲಿಸಿ ನಮೂನೆ–3 ಮತ್ತು ನಮೂನೆ – 3ಎ ಇ– ಖಾತಾ ನಮೂನೆಯನ್ನು ಪಡೆಯಬಹುದಾಗಿದೆ ಎಂದು ಗಜೇಂದ್ರಗಡ ಪುರಸಭೆ ಕಾರ್ಯಾಲಯ ಪ್ರಕಟಣೆ ತಿಳಿಸಿದೆ.

**ಎ ರಿಜಿಸ್ಟರ್ ನಲ್ಲಿ ದಾಖಲಿಸಿ ಆಸ್ತಿ ಇ–ಖಾತಾ ( ನಮೂನೆ–3 ) ಪಡೆಯಲು ಸಲ್ಲಿಸಬೇಕಾದ ದಾಖಲೆಗಳು**

ಆಸ್ತಿ ಸಂಬಂಧಿಸಿದಂತೆ ಸ್ವತ್ತಿನ ಮಾಲೀಕತ್ವ ಸಾಬೀತು ಮಾಡಿಸುವ ನೊಂದಾಯಿತ ಮಾರಾಟ ಪತ್ರಗಳು / ದಾನ ಪತ್ರ / ವಿಭಾಗ ಪತ್ರಗಳೂ ಅಥವಾ ಸರ್ಕಾರದ ನಿಗಮ ಮಂಡಳಿಗಳಿಂದ ನೀಡಲಾದ ಹಕ್ಕು ಪತ್ರಗಳು / ಕಂದಾಯ ಇಲಾಖೆಯಿಂದ ನೀಡಲಾದ ಹಕ್ಕು ಪತ್ರ., ಮಾಲೀಕರ ಪೋಟೋ ಮತ್ತು ಸ್ವತ್ತಿನ ಪೋಟೋ, ಮಾಲೀಕರ ಗುರುತಿನ ದಾಖಲೆ ಪ್ರತಿ, ಸಕ್ಷಮ ಪ್ರಾಧಿಕಾರದಿಂದ ಪಡೆದ ಬಡಾವಣೆ ಅನುಮೋದನೆ ಪತ್ರ 6 ಹಾಗೂ ಕೆ.ಜಿ.ಪಿ. ನಕ್ಷೆ ( ಹೊಸ ಬಡಾವಣೆ) , ಚಾಲ್ತಿ ಸಾಲಿನ/ ಇತ್ತಿಚಿನ ಆಸ್ತಿ/ ಶುಲ್ಕ ರಸೀದಿ( ಹಿಂದಿನ ಸಾಲುಗಳ ತೆರಿಗೆ ಬಾಕಿ ಇದ್ದಲ್ಲಿ ಪಾವತಿಸುವುದು), ಪ್ರಸಕ್ತ ಸಾಲಿನವರೆಗೆ ಋಣಭಾರ ಪ್ರಮಾಣ ಪತ್ರ,

**ಬಿ ರಿಜಿಸ್ಟರ್‌ನಲ್ಲಿ ದಾಖಲಿಸಿ ಆಸ್ತಿ ಇ– ಖಾತಾ ( ನಮೂನೆ–3ಎ ) ಪಡೆಯಲು ಸಲ್ಲಿಸಬೇಕಾದ ದಾಖಲೆಗಳು:** ಆಸ್ತಿಗೆ ಸಂಬಂಧಿಸಿದ ಸ್ವತ್ತಿನ ಮಾಲೀಕತ್ವ ಸಾಬೀತುಪಡಿಸುವ ದಿನಾಂಕ: 10–09–2024 ರ ಪೂರ್ವದಲ್ಲಿ ನೊಂದಾಯಿತ ಮಾರಾಟ ಪತ್ರಗಳು/ದಾನ ಪತ್ರ/ವಿಭಾಗ ಪತ್ರಗಳು/ಹಕ್ಕು ಖುಲಾಸೆ ಪತ್ರಗಳು, ಸ್ವತ್ತಿನ ಮಾಲೀಕರ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ , ಸ್ವತ್ತಿನ ಭಾವಚಿತ್ರ, ಮಾಲೀಕರ ಗುರುತಿನ ದಾಖಲೆ( ಮತದಾರರ ಗುರುತಿನ ಚೀಟಿ ಪ್ಯಾನ ಕಾರ್ಡ ಡ್ರೈವಿಂಗ ಲೈಸನ್ಸ ಪಾಸ್‌ಪೋರ್ಟ ಪಡಿತರ ಚೀಟಿ ) ಇವುಗಳಲ್ಲಿ ಯಾವುದಾದರೊಂದು, ಚಾಲ್ತಿ ಸಾಲಿನ /ಇತ್ತೀಚಿನ ಆಸ್ತಿ ಶುಲ್ಕ ರಶೀದಿ (ಹಿಂದಿನ ಸಾಲುಗಳ ತೆರಿಗೆ ಭಾಕಿ ಇದ್ದಲಿ ಪಾವತಿಸುವುದು).

ಮೇಲಿನಂತೆ ನಮೂನೆ–3 ಹಾಗೂ ನಮೂನೆ –3ಎ ಇ–ಖಾತಾ ದಾಖಲೆಗಳನ್ನು ಸಲ್ಲಿಸುವಂತೆ ಮುಖ್ಯಾಧಿಕರಿಗಳು ಪುರಸಭೆ ಗಜೇಂದ್ರಗಡ ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ. 08381–262222 ಮತ್ತು ಮೊಬೈಲ್ ಸಂಖ್ಯೆ: 9886424360, 9916191016 ವಾಟ್ಸಾಪ್ ಸಂಖ್ಯೆ. 9916191016, ಇ–ಮೇಲ್: ka.gajedragad.tmc@gmail.com

### ದಾಹ ತೀರಿಸಿಕೊಳ್ಳಲು ನಿಂಬೆ ಜ್ಯೂಸ್‌ಗೆ ಮೊರೆಹೋದ ಉತ್ತರ ಕರ್ನಾಟಕದ ಜನತೆ

# ಸೇಬಿನ ಬೆಲೆ ಮೀರಿಸಿದ ನಿಂಬೆ!

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಉತ್ತರ ಕರ್ನಾಟಕದಲ್ಲಿ ಬೇಸಿಗೆಯ ಬಿಸಿ ತಡೆದುಕೊಳ್ಳಲಾಗದ ಜನ ಬಿಸಿಗಾಳಿಯಿಂದ ದೇಹವನ್ನು ತಂಪಾಗಿಡಲು ಪರದಾಡುತ್ತಿದ್ದಾರೆ. ಸುಲಭವಾಗಿ ನಿಂಬೆ ಹಣ್ಣಿನ ಪಾನಕ, ಜ್ಯೂಸ್‌ಗಳಿಂದ ದೇಹವನ್ನು ತಂಪಾಗಿಸಿಕೊಳ್ಳಬಹುದಾಗಿದ್ದು, ಇದರಿಂದ ನಿಂಬೆ ಹಣ್ಣಿಗೆ ಮಾರುಕಟ್ಟೆಯಲ್ಲಿ ಭಾರೀ ಬೇಡಿಕೆ ಬಂದಿದೆ.

ಕೆ.ಜಿ ಬಾಳೆಹಣ್ಣಿನ ಬೆಲೆ 100 ರೂ, ಸೇಬು ಬೆಲೆ 200 ರೂಪಾಯಿ ಆದರೆ,



100 ನಿಂಬೆ ಹಣ್ಣಿನ ಬೆಲೆ 500ರಿಂದ 600 ರೂಪಾಯಿ ತಲುಪಿದೆ. ಬಿಸಿಗಾಳಿ ಹಾಗೂ ಉಷ್ಣದಿಂದ ಬಾಣಂತಿಯರು, ಗರ್ಭಿಣಿಯರು, ವಯೋವೃದ್ಧರು, ವಯಸ್ಕರರು ಹಾಗೂ ಮಕ್ಕಳು ಎಚ್ಚರಿಕೆಯಿಂದಿರುವಂತೆ ವೈದ್ಯರು ಸಲಹೆ ನೀಡುತ್ತಿದ್ದಾರೆ.

> ಬಿಸಿಲಿನ ತಾಪಮಾನ ಹೆಚ್ಚಾಗುತ್ತಿರುವ ಕಾರಣ ಬಿಸಿಲಿನಲ್ಲಿ ಮಧ್ಯಾಹ್ನ 12 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ವಯಸ್ಸಾದವರು ಮತ್ತು ಮಕ್ಕಳು ಹೊರಗಡೆ ಹೋಗಬಾರದು. ತಂಪು ಪಾನೀಯಗಳಿಗೆ ಮೊರೆ ಹೋಗದೆ ಲಿಂಬೆಹಣ್ಣಿನ, ಹಣ್ಣುಗಳ, ಎಳನೀರು ಕುಡಿಯಬೇಕು. ಬಿಸಿಲಿನಲ್ಲಿ ವೃದ್ಧರಿಗೆ ಮತ್ತು ಮಕ್ಕಳಿಗೆ ನೀರನ್ನು ಕುಡಿಸುತ್ತಿರಬೇಕು ಒಂದು ವೇಳೆ ಮಕ್ಕಳಲ್ಲಿ ನಿರ್ಜಲೀಕರಣ ಉಂಟಾದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು
>
> **– ಡಾ. ಲಕ್ಷ್ಮಣ ಪೂಜಾರ.**
> **ತಾಲೂಕಾ ಆರೋಗ್ಯ ಅಧಿಕಾರಿಗಳು, ಮುಂಡರಗಿ.**

ಇದರಿಂದ ಜ್ಯೂಸ್ ಅಂಗಡಿಗಳಿಗೆ ಬರುವ ಗ್ರಾಹಕರು, ನಿಂಬೆ ಹಣ್ಣಿನ ಜ್ಯೂಸ್‌ಗಳನ್ನೇ ಹೆಚ್ಚಾಗಿ ಕೇಳುತ್ತಿದ್ದಾರೆ. ಆದರೆ ಒಂದು ನಿಂಬೆ ಹಣ್ಣಿನ ಬೆಲೆ 6ರಿಂದ 8 ರೂಪಾಯಿ ಆಗಿರುವುದರಿಂದ ಜ್ಯೂಸ್ ಅಂಗಡಿಯವರು ವಿಧಿಯಿಲ್ಲದೆ ದುಬಾರಿ ಬೆಲೆ ತೆತ್ತು ನಿಂಬೆ ಹಣ್ಣುಗಳನ್ನು ಖರೀದಿ ಮಾಡುತ್ತಿದ್ದಾರೆ.

ಬೇಸಿಗೆ ಬಂತೆಂದರೆ ಮನುಷ್ಯನ ಅರೋಗ್ಯದಲ್ಲಿ ಹಲವು ರೀತಿಯಲ್ಲಿ ಏರುಪೇರು ಉಂಟಾಗುತ್ತದೆ. ಪ್ರಮುಖವಾಗಿ ದೇಹದಲ್ಲಿನ ನೀರಿನಾಂಶ ಕಡಿಮೆ ಆಗುತ್ತಾ ಹೋಗುತ್ತದೆ. ಹೀಗಾಗಿ ಬೇಸಿಗೆ ಕಾಲದಲ್ಲಿ ಆದಷ್ಟು ಆರೋಗ್ಯದ ಬಗೆಗೆ ಹೆಚ್ಚಿನ ಕಾಳಜಿ ವಹಿಸಲೇಬೇಕು. ಈ ಸಮಯದಲ್ಲಿ ಯಾವುದೇ ಕಾರಣಕ್ಕೂ ಮಾರುಕಟ್ಟೆಯಲ್ಲಿ ಸಿಗುವ ಕೃತಕ ಸಕ್ಕರೆ ಅಂಶ ಇರುವ ತಂಪು ಪಾನೀಯಗಳ ಮೊರೆ ಹೋಗಬಾರದು. ಇದರಿಂದ ಆರೋಗ್ಯ ಸಮಸ್ಯೆಗಳು ಬರುವ ಜೊತೆಗೆ ದೀರ್ಘಕಾಲದ ಕಾಯಿಲೆಗಳು ಕೂಡ ಬರುವ ಸಾಧ್ಯತೆ ಇರುತ್ತದೆ.

ಜ್ಯೂಸ್ ಅಂಗಡಿಗಳಲ್ಲಿ ಲಿಂಬೆಹಣ್ಣಿನ ಲಿಂಬು ಸೋಡಾ, ಲಸ್ಸಿ, ಮಜ್ಜಿಗೆ, ಎಳೆನೀರು, ಹಣ್ಣುಗಳ ಜ್ಯೂಸ್ ಕುಡಿಯಬೇಕು. ಇಲ್ಲವಾದರೆ ಇದರ ಬದಲು ಮನೆಯಲ್ಲಿಯೇ ರೆಡಿ ಮಾಡಿದ ನಿಂಬೆ ಹಣ್ಣಿನ ಜ್ಯೂಸ್ ಕುಡಿಯುವ ಅಭ್ಯಾಸ ಮಾಡಿಕೊಂಡರೆ ಆರೋಗ್ಯಕ್ಕೆ ಬಹಳ ಒಳ್ಳೆಯದು. ನಿಂಬೆಹಣ್ಣಿನಲ್ಲಿರುವ ಸಿಟ್ರಿಕ್ ಆಮ್ಲ ಹಾಗೂ ವಿಟಮಿನ್ ಸಿ ಅಂಶ ದೇಹದ ಜೀರ್ಣ ಶಕ್ತಿಯನ್ನು ಹೆಚ್ಚು ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎನ್ನುತ್ತಾರೆ ವೈದ್ಯರು.

> ಬೆಸಿಗೆಯ ಬಿಸಿಲಿನ ತಾಪಕ್ಕೆ ಕೃತಕ ಪಾನೀಯಗಳಿಗೆ ಮೊರೆ ಹೋಗುವುದಕ್ಕಿಂತ ಮುಂದಿನ ಪೀಳಿಗೆಯ ಹಿತಕ್ಕಾಗಿ ಗಿಡಗಳನ್ನು ಬೆಳಸುವುದರ ಮೂಲಕ ಪ್ರತಿಯೊಬ್ಬರೂ ಅರಣ್ಯವನ್ನು ಸಂರಕ್ಷಿಸಿ ಬೆಳೆಸಬೇಕಾಗಿದೆ. ಇದರಿಂದ ಮುಂದಿನ ದಿನಮಾನಗಳಲ್ಲಿ ಬಿಸಿಲಿನ ತಾಪಮಾನ ತಗ್ಗಿಸಲು ಸಾಧ್ಯ. ಇದಕ್ಕಾಗಿ ಅರಣ್ಯ ಇಲಾಖೆಯೊಂದಿಗೆ ಕೈಜೋಡಿಸಿ ಸಹಕಾರ ನೀಡಿ.
>
> **– ಮಂಜುನಾಥ ಮೇಗಲಮನಿ.**
> **ಕಪ್ಪತ್ತಗುಡ್ಡ ಅರಣ್ಯ ವಲಯ ಅಧಿಕಾರಿ.**

# ಸರ್ಕಾರದ ಯೋಜನೆಗಳು ಅರ್ಹರಿಗೆ ಲಭ್ಯವಾಗಲಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಹಿರಿಯ ನಾಗರಿಕರು ಸಮಾಜದ ದಾರಿದೀಪವಿದ್ದಂತೆ. ದೇಶದಲ್ಲಿರುವ ಅಂದಾಜು 25 ಕೋಟಿಯಷ್ಟು ಹಿರಿಯ ನಾಗರಿಕರಿಗೆ ಸರ್ಕಾರ ಘೋಷಿಸುವ ಯೋಜನೆ, ಸೌಲಭ್ಯಗಳು ಸಕಾಲಕ್ಕೆ ಅರ್ಹರಿಗೆ ಲಭಿಸುವಂತಾಗಬೇಕು ಎಂದು ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘದ ತಾಲೂಕು ಘಟಕದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಹೇಳಿದರು.

ಅವರು ಮಂಗಳವಾರ ಪಟ್ಟಣದ ಬಾಳಿಕಾಯಿ ಅವರ ಜಿನ್ನಿಂಗ್ ಮಿಲ್‌ನಲ್ಲಿ ನಡೆದ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘದ ಸಭೆಯಲ್ಲಿ ಮಾತನಾಡಿದರು.

ಹಿರಿಯ ನಾಗರಿಕರಿಗೆ ಪ್ರತಿ ತಿಂಗಳು 10 ಸಾವಿರ ರೂ ಗೌರವಧನ, ಉಚಿತ ರೈಲು, ಬಸ್ ಪ್ರಯಾಣಕ್ಕೆ ಅವಕಾಶ, ಆಸ್ಪತ್ರೆಯಲ್ಲಿ ಹಿರಿಯರಿಗೆ ಪ್ರತ್ಯೇಕ ಮತ್ತು ಪ್ರಥಮ ಆದ್ಯತೆ ನೀಡಬೇಕು. ಪೊಲೀಸ್ ಠಾಣೆಯಲ್ಲಿ ಸಾಂತ್ವನ



ಕೇಂದ್ರ, ಸಮುದಾಯ ಭವನ ನಿರ್ಮಿಸಲು ಜಾಗದ ವ್ಯವಸ್ಥೆ, ಅಭಿವೃದ್ಧಿ ನಿಗಮ ಸೇರಿದಂತೆ ಹೆಚ್ಚಿನ ಸವಲತ್ತು ನೀಡಬೇಕು. ಈ ಎಲ್ಲ ಬೇಡಿಕೆಗಳನ್ನು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಈಡೇರಿಸಬೇಕು ಎಂದು ವಿನಂತಿಸಿದರು.

ಅಧ್ಯಕ್ಷತೆ ವಹಿಸಿದ್ದ ಸಿ.ಎಫ್. ಬೂದಿಹಾಳ, ಸಂಘದ ಉಪಾಧ್ಯಕ್ಷ ಚಂಬಣ್ಣ ಬಾಳಿಕಾಯಿ ಮಾತನಾಡಿದರು.

ಸಂಘದ ಗೌರವಾಧ್ಯಕ್ಷ ಚನ್ನಪ್ಪ ಕೋಲಕಾರ, ನಾಗರಾಜ ಹೇಮಗಿರಿಮಠ, ಪ್ರಕಾಶ ಉಪನಾಳ, ಎಸ್.ಪಿ. ಸಭಾವಡೆಮಠ, ಎಮ್. ಕೆ. ಕಳ್ಳಿಮಠ, ಡಾ. ಶಿವಾನಂದ ಹೂವಿನ, ಚಂದ್ರಶೇಖರ ಹೂಗಾರ, ನಾಗರಾಜ ಪೂಜಾರ, ವಿ.ಸಿ. ರಬಕವಿ, ಎಸ್.ಬಿ. ತಾಳಿಕೋಟಿಮಠ, ಆಯ್. ಎಸ್. ಮಡಿವಾಳರ ಸೇರಿ ಸಂಘದ ತಾಲೂಕು ಘಟಕದ ಪದಾಧಿಕಾರಿಗಳು, ಸದಸ್ಯರು ಇದ್ದರು. ಆಯ್.ಎಸ್. ಬಡಿಗೇರ ನಿರೂಪಿಸಿದರು.

### ರಾಣೆಬೆನ್ನೂರಿನ ಮಂಜುನಾಥ ನಾಟ್ಯ ಸಂಘದವರಿಂದ ನಾಟಕ ಪ್ರದರ್ಶನ ಆರಂಭ

# ನಾಟಕ ಕಲೆ ತೆರೆಮರೆಗೆ ಸರಿಯುತ್ತಿದೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮೊಬೈಲ್, ಟಿವಿ ಮಾಧ್ಯಮದ ಆಧುನಿಕ ಭರಾಟೆಯಲ್ಲಿ ಬದುಕಿನ ಮೌಲ್ಯಗಳನ್ನು ತಿಳಿಸುವ ನಾಟಕ ಕಲೆ ತೆರೆಮರೆಗೆ ಸರಿಯುತ್ತಿದ್ದು, ಜೀವಂತ ನಾಟಕ ಕಲೆಯನ್ನು ಉಳಿಸಿ–ಬೆಳೆಸಿ–ಪ್ರೋತ್ಸಾಹಿಸುವ ಗುರುತರ ಜವಾಬ್ದಾರಿ ಎಲ್ಲರದ್ದಾಗಿದೆ ಎಂದು ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ ಹೇಳಿದರು.

ಅವರು ಪಟ್ಟಣಲ್ಲಿ ರಾಣೆಬೆನ್ನೂರಿನ ಮಂಜುನಾಥ ನಾಟ್ಯ ಸಂಘದವರು ರವಿವಾರದಿಂದ ಪ್ರಾರಂಭಿಸಿದ ನಾಟಕ ಪ್ರದರ್ಶನದಲ್ಲಿ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ವೃತ್ತಿರಂಗಭೂಮಿ ಕಲಾವಿದರು ಅಪ್ಪಟ ಕಲಾವಿದರಾಗಿದ್ದು, ವೇದಿಕೆಯಲ್ಲಿ ಪ್ರೇಕ್ಷಕರ ಮನಸನ್ನು ಸೆಳೆಯುವ ಸಾಮರ್ಥ್ಯವನ್ನು ರಂಗಭೂಮಿ ಕಲಾವಿದರು ಹೊಂದಿರುತ್ತಾರೆ. ನಮ್ಮ ತಾಲೂಕು ಹಾಗೂ ಗದಗ ಜಿಲ್ಲೆಯಲ್ಲಿ ಕಲಾವಿದರನ್ನು ಗೌರವದಿಂದ ಕಾಣುವ ಕಲಾಪೋಷಕರಿದ್ದು, ಇಂತಹ ನಾಟಕಗಳನ್ನು ಜನರು ನೋಡುವ ಮೂಲಕ ಅವರಿಗೆ ಪ್ರೋತ್ಸಾಹ



ನೀಡುವ ಕಾರ್ಯವನ್ನು ಮಾಡಬೇಕು. ತೆರೆ–ಯ ಹಿಂದಿನ ಕಲಾವಿದರ ಬದುಕು ಅತ್ಯಂತ ಕಷ್ಟದಾಯಕವಾಗಿರುತ್ತದೆ. ಸರಕಾರಗಳು ಸಹ ರಂಗಭೂಮಿಯ ಅಭಿವೃದ್ಧಿಗೆ ಸಹಾಯ ಒದಗಿಸುವದು ಅಗತ್ಯವಾಗಿದೆ.

ಲಕ್ಷ್ಮೇಶ್ವರ ತಾಲೂಕು ಸಾಂಸ್ಕೃತಿಕ ಕಲೆಗಳ ನೆಲೆವೀಡಾಗಿದ್ದು ಇಲ್ಲಿ ಕಲೆ, ಕಲಾವಿದರನ್ನು ಸದಾ ಗೌರವಿಸಲಾಗುತ್ತಿದೆ. ದೇಶದ ಮೊದಲ ಮಹಿಳಾ ನಾಟಕ ಕಂಪನಿ ಪ್ರಾರಂಭವಾಗಿದ್ದು ಲಕ್ಷ್ಮೇಶ್ವರದಲ್ಲಿ ಎನ್ನುವದು ನಮ್ಮ ಹೆಮ್ಮೆ. ಇಲ್ಲಿ ಅನೇಕ ಕಲಾವಿದರು, ನಾಟ್ಯ ಸಂಘಗಳು ಆಗಿ ಹೋಗಿದ್ದು, ರಂಗಭೂಮಿಯಲ್ಲಿರುವ ಕಲಾವಿದರಿಗೆ ಗೌರವ ನೀಡುವ ಕಾರ್ಯವಾಗಬೇಕು ಎಂದು ಹೇಳಿದರು.

ಕಾರ್ಯಕ್ರಮವನ್ನು ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ ಉದ್ಘಾಟಿಸಿದರು.

> ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಂಜುನಾಥ ನಾಟ್ಯ ಸಂಘದ ಮಾಲೀಕ ಮಲ್ಲಿಕಾರ್ಜುನ ಚಿಕ್ಕಮಠ ಮಾತನಾಡಿ, ರಂಗಭೂಮಿಗೆ ಪ್ರೋತ್ಸಾಹದ ಕೊರತೆಯಿಂದ ನಾಟ್ಯ ಸಂಘಗಳು ಮುಚ್ಚಿಹೋಗುವಂತಹ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಜನರು ನಾಟಕಗಳನ್ನು ನೋಡುವ ಮೂಲಕ ಬಡ ಕಲಾವಿದರ ಹಾಗೂ ನಾಟಕ ಕಂಪನಿಗಳ ಪೋಷಣೆ ಮಾಡಬೇಕೆಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಅಧ್ಯಕ್ಷ ಬಸವರಾಜ ಬಾಳೇಶ್ವರಮಠ, ತಾ.ಕಾ.ನಿ.ಪ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಕಳಸಾಪುರ, ದಿಗಂಬರ ಪೂಜಾರ, ಶಿವಲಿಂಗಯ್ಯ ಹೊತಗಿಮಠ, ಸೋಮಣ್ಣ ಯತ್ನಳ್ಳಿ, ಕರಿಯಪ್ಪ ಶಿರಹಟ್ಟಿ, ಸಿದ್ದು ದುರಗಣ್ಣವರ, ಕಂಪನಿಯ ವ್ಯವಸ್ಥಾಪಕ ಸುದರ್ಶನ ಚಿಕ್ಕಮಠ, ಮುಖ್ಯ ವ್ಯವಸ್ಥಾಪಕ ಮಹಾಂತೇಶ ಚಿಕ್ಕಮಠ, ಸಂಚಾಲಕಿ ನಿವೇದಿತಾ ಚಿಕ್ಕಮಠ ಮುಂತಾದವರಿದ್ದರು.

# ಜೋಡಿ ಹಕ್ಕಿಗಳ ಭಾಷೆ

ಶಬ್ದಗಳ ಲೋಕದಲ್ಲಿ ನಿಶ್ಯಬ್ದದ ಭಾಷೆ ..
ಕಣ್ಣಂಚಿನ ತುದಿಯಲ್ಲಿ ತವಕದ ಭಾಷೆ ..
ತುಟಿಯಂಚಿನಲ್ಲಿ ಮುಗುಳ್ನಗುತ್ತಿರುವ ಭಾಷೆ ..
ಸರಿ–ತಪ್ಪುಗಳ ವಿಮರ್ಶೆಯ ನಡುವೆ
ಮೌನವಾಗಿ ಗುನುಗುಡುತ್ತಿರುವ ಮನಸ್ಸಿನ ಭಾಷೆ..

ಹಂಚಿಕೊಳ್ಳಲು ಅಸಾಧ್ಯವಾದ ಭಾಷೆ ..
ಭಾವದಂಚಿನ ಗಡಿ ದಾಟಿದ ಭಾಷೆ ..
ಬದುಕಿನಲ್ಲಿ ಜೊತೆಯಾಗಲು ಕಾತುರದ ಭಾಷೆ..
ಅಂತರಂಗದ ಆಸೆ ಅನುಭವಿಸಿದ ಭಾಷೆ..
ಈ ಭಾಷೆ ಜೋಡಿ ಹಕ್ಕಿಗಳ ನವ ಬದುಕಿನ ಆರಂಭದ ಅಭಿಲಾಷೆ..

**–ಪವಿತ್ರ ಬಡಿಗೇರ್**

# ಉಚಿತ ಯೋಗ ಶಿಬಿರ ಇಂದಿನಿಂದ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬಸವ ಪತಂಜಲಿ ಯೋಗ ಸಮಿತಿ ಕರ್ನಾಟಕ, ತಾಲೂಕಾ ಕಂದಾಯ, ಪೊಲೀಸ್ ಇಲಾಖೆ, ಹಿರಿಯ ನಾಗರಿಕರು, ಯೋಗ ಸಾಧಕರು, ಸರಕಾರಿ ನೌಕರರು, ಪತ್ರಕರ್ತರು ಸೇರಿ ವಿವಿಧ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಪಟ್ಟಣದ ಮಾಂತೇಶ ನಗರದ ಬಿಸಿಎನ್ ಸ್ಪೆಕ್ಟ್ರಮ್ ಆಂಗ್ಲ ಶಾಲಾವರಣಲ್ಲಿ ಮಾ. 6ರಿಂದ ಮಾ.16ರವರೆಗೆ ಉಚಿತ ಯೋಗ, ನಿಸರ್ಗ ಚಿಕಿತ್ಸಾ ಶಿಬಿರ ಹಮ್ಮಿಕೊಂಡಿದೆ. ವೀರೇಶ ಗುರೂಜಿ ಅವರ ನೇತೃತ್ವದಲ್ಲಿ ನಿತ್ಯ ಬೆಳಿಗ್ಗೆ 5.15ರಿಂದ 7 ಗಂಟೆವರೆಗೆ ಯೋಗ, ಪ್ರಾಣಾಯಾಮ, ಧ್ಯಾನ ಶಿಬಿರ, ನಂತರ 7ರಿಂದ 8 ಗಂಟೆವರೆಗೆ ನಿಸರ್ಗ ಚಿಕಿತ್ಸೆ ನಡೆಯಲಿದೆ ಎಂದು ಸಂಘಟಕರಾದ ಬಸವ ಯೋಗಾಶ್ರಮದ ವೈದ್ಯ ಸಂಗಣ್ಣ ತಿಳಿಸಿದ್ದಾರೆ.

# ಸುಹಾಸಿನಿ ಆನಂದರಿಗೆ ಪಿಎಚ್‌ಡಿ

**■ವಿಜಯಸಾಕ್ಷಿ ಸುದ್ದಿ, ವಿಜಯಪುರ**



ಸುಹಾಸಿನಿ ಆನಂದ ಅವರು ಸಲ್ಲಿಸಿದ್ದ "ರೋಲ್ ಆಫ್ ವುಮೆನ್ ಫಾರ್ಮರ್ಸ್ ಆ್ಯಂಡ್ ಅಗ್ರಿಕಲ್ಚರಲ್ ಲೇಬರ್ಸ್ ಇನ್ ಎಕನಾಮಿಕ್ ಡೆವಲಪ್‌ಮೆಂಟ್ ಇನ್ ವಿಜಯಪುರ ಡಿಸ್ಟ್ರಿಕ್ಟ್– ಎ ಸೋಷಿಯೋಲಾಜಿಕಲ್ ಸ್ಟಡಿ' ಕುರಿತು ಸಲ್ಲಿಸಿದ್ದ ಮಹಾಪ್ರಬಂಧಕ್ಕೆ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯವು ಪಿಎಚ್‌ಡಿ ಪದವಿ ನೀಡಿದೆ. ಸುಹಾಸಿನಿ ಆನಂದ ಅವರು ಸಮಾಜಶಾಸ್ತ್ರ ವಿಭಾಗದ ಪ್ರೊ. ಎಮ್.ಪಿ. ಬಳಿಗಾರ್ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ಕೈಗೊಂಡಿದ್ದರು. ಡಾಕ್ಟರೇಟ್ ಪದವಿ ಪಡೆದಿರುವ ಸುಹಾಸಿನಿ ಆನಂದ ಅವರನ್ನು ಹಂಗಾಮಿ ಕುಲಪತಿ ಪ್ರೊ. ಶಾಂತಾದೇವಿ ಟಿ, ಕುಲಸಚಿವ ಶಂಕರಗೌಡ ಸೋಮನಾಳ, ಮೌಲ್ಯಮಾಪನ ಕುಲಸಚಿವ ಪ್ರೊ. ಎಚ್. ಎಂ. ಚಂದ್ರಶೇಖರ ಅಭಿನಂದಿಸಿದ್ದಾರೆ.

# ದ್ರಾಕ್ಷಿ ತುಂಬಿದ್ದ ವಾಹನ ಅಪಘಾತ

**■ವಿಜಯಸಾಕ್ಷಿ ಸುದ್ದಿ, ನೆಲಮಂಗಲ**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ರಾಷ್ಟ್ರೀಯ ಹೆದ್ದಾರಿ ಬಳಿ ದ್ರಾಕ್ಷಿ ತುಂಬಿದ ಬುಲೆರೊ ವಾಹನ ಅಪಘಾತಕ್ಕೀಡಾಗಿದೆ. ಘಟನೆಯಿಂದ ವಾಹನದಲ್ಲಿದ್ದ ದ್ರಾಕ್ಷಿಯೆಲ್ಲಾ ರಸ್ತೆಯಲ್ಲಿ ಚೆಲ್ಲಾಪಿಲ್ಲಿಯಾಗಿದ್ದು, ರೈತ ಕಂಗಾಲಾಗಿದ್ದಾನೆ.

ಇನ್ನೂ ರಸ್ತೆಯಲ್ಲಿ ಚೆಲ್ಲಾಪಿಲ್ಲಿಯಾದ ದ್ರಾಕ್ಷಿ ಕಂಡು ನಾ ಮುಂದು ತಾ ಮುಂದು ಎಂದು ದ್ರಾಕ್ಷಿಯನ್ನು ಜನತೆ ಹೊತ್ತೊಯ್ದಿದ್ದಾರೆ.

### 7ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಅರುಣ ಕುಲಕರ್ಣಿ ಕರೆ

# ಪಾಲಕರು ಪುಸ್ತಕ ಸಂಸ್ಕೃತಿಯನ್ನು ಬೆಳೆಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಕ್ಕಳ ಎದುರಿಗೆ ಪಾಲಕರು ಮೊಬೈಲ್ ನೋಡುತ್ತಲೋ ಅಥವಾ ಟಿವಿ ನೋಡುತ್ತಲೋ ಕೂರಬಾರದು. ಬದಲಿಗೆ ಅವರು ತಮ್ಮ ಕೈಯಲ್ಲಿ ಪುಸ್ತಕವನ್ನು ಹಿಡಿದು ಕುಳಿತುಕೊಂಡರೆ ಮಕ್ಕಳೂ ಸಹ ಅದನ್ನೇ ಅನುಕರಣೆ ಮಾಡುತ್ತಾರೆ. ಆದ್ದರಿಂದ ಪಾಲಕರು ಮೊದಲು ತಮ್ಮಲ್ಲಿ ಪುಸ್ತಕ ಸಂಸ್ಕೃತಿಯನ್ನು ಬೆಳೆಸಿಕೊಳ್ಳಬೇಕೆಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಸಮೀಪದ ಜಕ್ಕಲಿ ಗ್ರಾಮದ ಗಂಡುಮಕ್ಕಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ, ಬಾಲಕಿಯರ ಹಿರಿಯ ಪ್ರಾಥಮಿಕ ಶಾಲೆ ಮತ್ತು ಕಿರಿಯ ಉರ್ದು ಪ್ರಾಥಮಿಕ ಶಾಲೆಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ 7ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಟಿ.ವಿ ಮತ್ತು ಮೊಬೈಲ್‌ಗಳಿಂದ ಇಂದಿನ ಮಕ್ಕಳು ಸಂಸ್ಕೃತಿಹೀನರಾಗುತ್ತಿದ್ದಾರೆ. ನಾವೇ



ಅವರನ್ನು ಹಾಳು ಮಾಡುತ್ತಿದ್ದೇವೇನೋ ಎನ್ನುವ ಅನುಮಾನ ಪಾಲಕರನ್ನು ಕಾಡುತ್ತಿದೆ. ಆದ್ದರಿಂದ ಮಕ್ಕಳನ್ನು ಇಂತಹ ವಸ್ತುಗಳಿಂದ ದೂರವಿಟ್ಟು ಅವರಲ್ಲಿ ಆಚಾರ–ವಿಚಾರಗಳನ್ನು, ಸಂಸ್ಕಾರ–ಸಂಸ್ಕೃತಿಗಳನ್ನು ಬೆಳೆಸುವುದು ಅವಶ್ಯಕವಾಗಿದೆ ಎಂದರು.

ಗ್ರಾ.ಪಂ ಅಧ್ಯಕ್ಷೆ ಗಂಗವ್ವ ಜಂಗಣ್ಣವರ ಮಾತನಾಡಿ, ಈಗ ಬೇಸಿಗೆ ಕಾಲ. ಗ್ರಾಮದ ನಿವಾಸಿಗಳು, ಅದರಲ್ಲೂ ತಾಯಂದಿರು ಹೆಚ್ಚಿನ ನೀರನ್ನು ಪೋಲು ಮಾಡದೆ ಗ್ರಾಮ ಪಂಚಾಯಿತಿಯೊಂದಿಗೆ ಸಹಕರಿಸಬೇಕೆಂದರು.

ಎಸ್‌ಡಿಎಂಸಿ ಅಧ್ಯಕ್ಷೆ ಲಲಿತಾ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷೆ ಮಾದರ, ಸದಸ್ಯ ಬಸವರಾಜ ಶಾಶೆಟ್ಟಿ, ಮುತ್ತಪ್ಪ ಮರಬಸಪ್ಪನವರ, ಇಂದಿರಾ ಜಂಗಣ್ಣವರ, ಶಾಂತಮ್ಮ ಮಾದರ, ಲಕ್ಷ್ಮೀ ಭಜಂತ್ರಿ, ಮಂಜುಳಾ ಜಕ್ಕಲಿ, ಕಳಕಪ್ಪ ರಂಗಣ್ಣವರ, ಅರುಣ ಸೂರಭಟ್ಟನವರ ಉಪಸ್ಥಿತರಿದ್ದರು. ಮುಖ್ಯ ಶಿಕ್ಷಕ ಎಸ್.ಬಿ. ಗವಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಮುಖ್ಯ ಶಿಕ್ಷಕ ಸಂಗಯ್ಯ ಪ್ರಭುಸ್ವಾಮಿಮಠ ಸ್ವಾಗತಿಸಿದರು. ಶಿಕ್ಷಕ ವಿ.ಎ. ಕುಂಬಾರ ವಂದಿಸಿದರು.

> ಮಧ್ಯಾಹ್ನದ ಭೋಜನದ ವೇಳೆ ತಾಯಂದಿರು ಮಕ್ಕಳಿಗೆ ಕೈತುತ್ತು ಹಾಕುವ ಕಾರ್ಯಕ್ರಮ ಇರುವುದು ಅತ್ಯಂತ ಸಂತಸದ ವಿಷಯ. ಇದು ತಾಯಿ–ಮಕ್ಕಳ ಸಂಬಂಧವನ್ನು ಬೆಸೆಯುವುದರ ಜೊತೆಗೆ ಮಕ್ಕಳಲ್ಲಿ ಸಂಸ್ಕಾರನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಇಂತಹ ಕಾರ್ಯಕ್ರಮ ಹಮ್ಮಿಕೊಂಡಿರುವ ಶಾಲಾ ಬಳಗದ ಕಾರ್ಯ ಅಭಿನಂದನಾರ್ಹ ಎಂದು ಅರುಣ ಕುಲಕರ್ಣಿ ತಿಳಿಸಿದರು.

# IPS ಅಧಿಕಾರಿಗಳ ಜಟಾಪಟಿ: ವರ್ತಿಕಾ ಬೆನ್ನಲ್ಲೇ ಡಿ.ರೂಪಾ ವರ್ಗಾವಣೆ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

IPS ಅಧಿಕಾರಿಗಳ ಜಟಾಪಟಿ ಮುಂದುವರಿದಿದ್ದು, ಡಿ.ರೂಪಾ ವಿರುದ್ಧ ಆರೋಪ ಮಾಡಿದ್ದ ವರ್ತಿಕಾ ಕಟಿಯಾರ್ ಅವರನ್ನು ಇತ್ತೀಚೆಗೆ ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿತ್ತು. ಈ ಆದೇಶ ಬೆನ್ನಲ್ಲೇ ಬುಧವಾರ ಡಿ.ರೂಪಾರನ್ನು ಐಎಸ್‌ಡಿಯಿಂದ ವರ್ಗಾವಣೆ ಮಾಡಲಾಗಿದೆ.

ತತ್‌ಕ್ಷಣದಿಂದ ಮತ್ತು ಮುಂದಿನ ಆದೇಶದ ತನಕ ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ನಿಯಮಿತ ಎಂಡಿಯಾಗಿ ಡಿ. ರೂಪಾರನ್ನು ವರ್ಗಾವಣೆ ಮಾಡಲಾಗಿದೆ.

ಫೆ.20 ರಂದು ವರ್ತಿಕಾ ಕಟಿಯಾರ್ 2000ನೇ ಬ್ಯಾಚ್‌ನ ಅಧಿಕಾರಿಯಾಗಿರುವ ಡಿ.ರೂಪಾ ವಿರುದ್ಧ ಸಿಎಸ್‌ಗೆ ದೂರು ನೀಡಿದ್ದರು. ಕಳೆದ ವರ್ಷದ ಸೆ.6ರಂದು ತಮ್ಮ ಅನುಮತಿಯಿಲ್ಲದೇ ಚೇಂಬರ್‌ನಿಂದ ಮಹತ್ವದ ಕಡತಗಳನ್ನು ಪೊಲೀಸ್ ಸಿಬ್ಬಂದಿಯಿಂದ ಡಿ. ರೂಪಾ ತರಿಸಿಕೊಂಡಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದರು. ಎರಡು ದಿನಗಳ ಹಿಂದೆಯಷ್ಟೇ ವರ್ತಿಕಾ ಕಟಿಯಾರ್‌ನ್ನು ಗೃಹರಕ್ಷಕ ಮತ್ತು ಪೌರ ರಕ್ಷಣಾ ದಳದ ಡಿಐಜಿ ಹುದ್ದೆಗೆ ಸರ್ಕಾರ ವರ್ಗಾವಣೆ ಮಾಡಿತ್ತು. ಅದರ ಬೆನ್ನಲ್ಲೇ ಇದೀಗ ಡಿ.ರೂಪಾರನ್ನು ಐಎಸ್‌ಡಿಯಿಂದ ಕರ್ನಾಟಕ ಸಿಲ್ಕ್ ಬೋರ್ಡ್ ಎಂಡಿ ಹುದ್ದೆಗೆ ವರ್ಗಾವಣೆ ಮಾಡಲಾಗಿದೆ. ಈ ಹಿಂದೆ ಹಿರಿಯ ಅಧಿಕಾರಿಗಳ ಮುಂದೆಯೇ ಸಭೆ ಕೊಠಡಿಯಲ್ಲಿ ಗಲಾಟೆ ಮಾಡಿಕೊಂಡಿದ್ದ ಐಎಸ್‌ಡಿ ಐಜಿಪಿ ರೂಪಾ ಮೌದ್ಗಿಲ್ ಮತ್ತು ಡಿಐಜಿ ವರ್ತಿಕಾ ಕಟಿಯಾರ್ ಸುದ್ದಿ ಆಗಿದ್ರು.

## ಗಾನಯೋಗಿ ಪಂಚಾಕ್ಷರಿ ಸಂಗೀತ ಪರಂಪರಾ ಸಮ್ಮೇಳನದಲ್ಲಿ ಜ.ಸದಾಶಿವಾನಂದ ಮಹಾಸ್ವಾಮಿಗಳು

# ಬದುಕು ಶೃತಿಗೊಳಿಸಿದ ವೀಣೆಯಂತಾಗಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ತಂತಿ ತಾಳದ ಹಿಂದೆ ಜೀವನದ ಪರಮ ರಹಸ್ಯವಿದೆ. ಸಂಗೀತಕ್ಕೆ ರೋಗ ನಿವಾರಿಸುವ ಅದ್ಭುತ ಶಕ್ತಿ ಇದೆ. ಸಂಗೀತ ಸಾಧನೆಗೆ ಸಾಮರ್ಥ್ಯ ಬರುವದು ತಪಸ್ಸು ಇದ್ದಾಗ. ಬದುಕು ಶೃತಿಗೊಳಿಸಿದ ವೀಣೆಯಂತಾಗಬೇಕು ಎಂದು ಗದಗ ಶಿವಾನಂದ ಬ್ರಹನ್ಮಠದ ಪೂಜ್ಯ ಜ.ಸದಾಶಿವಾನಂದ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು. ನಗರದ ಅಡವೀಂದ್ರಸ್ವಾಮಿ ಮಠದಲ್ಲಿ ಶ್ರೀಮಠದ ಕೃಪಾಶ್ರಯದಲ್ಲಿ ಶ್ರೀಗುರು ಪಂಚಾಕ್ಷರಿ ಸೇವಾ ಸಮಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಜರುಗಿದ 333ನೇ ಶಿವಾನುಭವ, ಗಾನಯೋಗಿ ಪಂಚಾಕ್ಷರಿ ಸಂಗೀತ ಪರಂಪರಾ ಸಮ್ಮೇಳನ, ಗುರುಕುಮಾರ ಪಂಚಾಕ್ಷರಿ ಸಮ್ಮಾನ–2025 ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ಹಸಿರುಕ್ರಾಂತಿಯ ಹೆಸರಿನಲ್ಲಿ ಹದ ಮತ್ತು ಫಲವತ್ತಾದ ಭೂಮಿಗೆ ರಾಸಾಯನಿಕ ಹಾಕಿ ಆ ಭೂಮಿಯ ಬೆಳೆಯ ಅನ್ನವನ್ನುಂಡು ಮಾನವನ ಶರೀರವು ರೋಗದ ಆಲಯವಾಗುತ್ತಿದೆ. ಎಚ್ಚೆತ್ತುಕೊಳ್ಳದಿದ್ದರೆ ಮುಂದೊಂದು ದಿನ ಆಹಾರಕ್ಕಾಗಿ ಪರಿತಪಿಸಬೇಕಾದೀತು ಎಂದರು. ಅಡುಗೆ ಮನೆಯಲ್ಲಿ ಮಸಾಲೆ ಸಾಮಗ್ರಿಗಳ ಡಬ್ಬಗಳು ಔಷಧ ಮಾತ್ರೆಯ ಡಬ್ಬಗಳಾಗಿ ಪರಿವರ್ತನೆಗೊಂಡಿವೆ.



ಸಣ್ಣಪುಟ್ಟ ಕಾಯಿಲೆಗಳಿಗೆ ಮನೆಯ ಮದ್ದು ಆಗಬೇಕಿದ್ದ ಅಡುಗೆ ಮನೆ ಔಷಧಾಲಯ ಆಗುತ್ತಿದೆ. ಆದ್ದರಿಂದ ಭೂಮಿಯ ಫಲವತ್ತತೆ ಕಾಯ್ದುಕೊಂಡಲ್ಲಿ ಸದೃಢ ಆರೋಗ್ಯ ಕಾಯ್ದುಕೊಳ್ಳಲು, ಪೌಷ್ಠಿಕ ಆಹಾರ ಲಭ್ಯವಾಗಲು ಸಾಧ್ಯ. ನೆಮ್ಮದಿಯ ಬದುಕಿಗೆ ಆಹ್ಲಾದಕರ ಸಂಗೀತ ಅವಶ್ಯವೆಂದರು. ನೇತೃತ್ವ ವಹಿಸಿದ್ದ ಹರ್ಲಾಪೂರದ ಕೊಟ್ಟೂರೇಶ್ವರ ಮಠದ ಪೂಜ್ಯ ಕೊಟ್ಟೂರೇಶ್ವರ ಮಹಾಸ್ವಾಮಿಗಳು ಮಾತನಾಡಿ, ಸಂಗೀತ ಆತ್ಮಸಂತೃಪ್ತಿ ಭಾವವನ್ನು ಸ್ಫುರಿಸುವದು. ಭಾವ ತುಂಬಿ ಹಾಡುವ ಗಾಯಕನಿಗೂ, ಕೇಳುಗನಿಗೂ ಹೆಚ್ಚು ತೃಪ್ತಿ ನೀಡುವ ಶಕ್ತಿ ಸಂಗೀತಕ್ಕಿದೆ. ಬದುಕಿನ ಬವಣೆ ಕಳೆಯುವ ಅದ್ಭುತ ತಾಕತ್ತು ಸಂಗೀತ ಕಲೆಗೆ ಇದೆ. ನಾಡಿನ ಅಂಧ, ಅನಾಥ, ಅಂಗವಿಕಲರ ಬದುಕಿಗೆ ಪಂಚಾಕ್ಷರ ಪುಟ್ಟರಾಜ ಗವಾಯಿಗಳು ಬೆಳಕಾದವರು. ಭಿಕ್ಷೆಯ ಪಾತ್ರೆ ಹಿಡಿದವರಿಗೆ ಅಕ್ಷಯ ಪಾತ್ರೆ ನೀಡಿದ ಪುಣ್ಯಾತ್ಮರಾಗಿದ್ದಾರೆ ಎಂದು ಬಣ್ಣಿಸಿದರು.ಸಮ್ಮುಖವನ್ನು ಅಡವೀಂದ್ರ ಮಠದ ಧರ್ಮದರ್ಶಿ ವೇ.ಮಹೇಶ್ವರಸ್ವಾಮಿಗಳು ವಹಿಸಿದ್ದರು. ಅಧ್ಯಕ್ಷತೆ ವಹಿಸಿದ್ದ ಸೇವಾ ಸಮಿತಿ ಅಧ್ಯಕ್ಷ ಪಂ.ಡಾ. ರಾಜಗುರು ಗುರುಸ್ವಾಮಿ ಕಲಿಕೇರಿ ಸಂದರ್ಭೋಚಿತವಾಗಿ ಮಾತನಾಡಿದರು. ಉದ್ಘಾಟನೆಯನ್ನು ರಾಣಿ ಚನ್ನಮ್ಮ ಕೋ.ಆ ಬ್ಯಾಂಕ್ ಅಧ್ಯಕ್ಷ ಡಾ. ಎಸ್.ಕೆ. ಮ್ಯಾಗೇರಿ ನೆರವೇರಿಸಿ ಮಾತನಾಡಿದರು. 'ಆರೋಗ್ಯದ ಮೂಲ ಸಂಗೀತ' ವಿಷಯವಾಗಿ ಡಾ.ಮಹಾಂತೇಶ ಸಜ್ಜನ ಉಪನ್ಯಾಸ ನೀಡಿದರು. ಮುಖ್ಯ ಅತಿಥಿಗಳಾಗಿ ಶಿವಾನುಭವ ಸಮಿತಿಯ ಡಾ. ಎಸ್.ಕೆ. ನಾಲತ್ವಾಡಮಠ, ಸರಸ್ವತಿ ಸಜ್ಜನ ಆಗಮಿಸಿದ್ದರು. ಪ್ರಸಾದ ಸೇವೆಯನ್ನು ಎಸ್. ಆರ್. ನಾಲತ್ವಾಡಮಠ, ಮೀನಾಕ್ಷಿ ಬೆನಕಣ್ಣವರ, ಶ್ರೀಶೈಲ ಗದಗಿನಮಠ, ರಾಚಪ್ಪ ಕಾಳಗಿ ವಹಿಸಿಕೊಂಡಿದ್ದರು. ಕಲಾವಿದರಾದ ಮಲ್ಲಿಕಾರ್ಜುನ ಭಜಂತ್ರಿ, ಶ್ಯಾಮರಾವ್ ಪುಲಾರಿ, ವೀರುಪಾಕ್ಷಯ್ಯ ಹೊಸಳ್ಳಿಮಠ, ಬಸವರಾಜ ಹೊನ್ನಿಗನೂರ, ಹುಚ್ಚಯ್ಯ ಹಿರೇಮಠ, ಸುಕ್ರುಸಾಬ ಮುಲ್ಲಾ, ವೀರಭದ್ರಪ್ಪ ಅಂಗಡಿ, ವಿಜಯಲಕ್ಷ್ಮೀ ಹಿರೇಮಠ ಅವರಿಂದ ಜರುಗಿದ ಸಂಗೀತ ಕಾರ್ಯಕ್ರಮ ಜನಮನ ಸೆಳೆಯಿತು. ಡಾ. ಶಿವಬಸಯ್ಯ ಗಡ್ಡದಮಠ ಸ್ವಾಗತಿಸಿದರು, ವ್ಹಿ.ಎಂ. ಕುಂದ್ರಾಳಹಿರೇಮಠ ನಿರೂಪಿಸಿದರು. ಕೊನೆಗೆ ಸೇವಾ ಸಮಿತಿಯ ಕಾರ್ಯದರ್ಶಿ ಮಲ್ಲಯ್ಯ ಶಿರೋಳಮಠ ವಂದಿಸಿದರು.

ಕೆಲವು ಅತಿ ಬುದ್ಧಿವಂತರೆನ್ನಿಸಿಕೊಂಡವರು ಆಚಾರ ಹೇಳಲು ಬಲು ಶೂರರಾಗಿದ್ದಾರೆ. ವಾಸ್ತವಿಕ ಬದುಕಿನಿಂದ ಅವರು ಬಹುದೂರ ಇದ್ದಾರೆ. ಪಾಲಕ–ಪೋಷಕರು ಮಕ್ಕಳಿಗೆ ಒಳ್ಳೆಯ ಸಂಸ್ಕಾರ, ಸಂಸ್ಕೃತಿ, ಧರ್ಮ, ಲಿಂಗಪೂಜೆಯನ್ನು ರೂಢಿಸಬೇಕು. ಸಂಸ್ಕಾರದಿಂದ ಸಮಾಜವನ್ನು ಕಟ್ಟುವ ಕೆಲಸ ಎಂದಿಗಿಂತ ಇಂದು ಅಗತ್ಯ. ಆಂತರಿಕವಾಗಿ ಲಿಂಗಾಯತರು ಸದೃಢಗೊಳ್ಳಬೇಕು ಎಂದ ಜ.ಸದಾಶಿವಾನಂದ ಮಹಾಸ್ವಾಮಿಗಳು, ಶಿವಾನುಭವ, ಸಂಗೀತ ಪರಂಪರಾ ಉತ್ಸವವನ್ನು ಅಚ್ಚುಕಟ್ಟಾಗಿ ಏರ್ಪಡಿಸಿದ್ದು ಶ್ಲಾಘನೀಯ ಎಂದರು.

# ಸರ್ಕಾರಿ ಶಾಲೆಯಲ್ಲಿ ಕಲಿತವರಿಗೆ ಗಟ್ಟಿತನ ಬಹಳ

■ವಿಜಯಸಾಕ್ಷಿ ಸುದ್ದಿ, ನರಗುಂದ

ಕನ್ನಡ ಶಾಲೆಯಲ್ಲಿ ಕಲಿತವರಿಗೆ ಗಟ್ಟಿತನ ಬಹಳ. ಹಳ್ಳಿಯಿಂದ ಹಿಡಿದು ದಿಲ್ಲಿಯವರೆಗೂ ಸರ್ಕಾರಿ ಶಾಲೆಯಲ್ಲಿ ಕಲಿತವರೇ ಆಡಳಿತ ನಡೆಸುತ್ತಿದ್ದಾರೆ. ಚಿಕ್ಕಂದಿನಿಂದಲೂ ಸರ್ಕಾರಿ ಶಾಲೆಗೂ ನನಗೂ ಆತ್ಮೀಯ ಒಡನಾಟ ಇದೆ. ಮುಂದಿನ ದಿನಮಾನಗಳಲ್ಲಿ ಇನ್ನೂ ಹೆಚ್ಚಿನ ಸಹಾಯವನ್ನು ಶಾಲೆಗೆ ನೀಡುತ್ತೇನೆ ಎಂದು ಉದ್ಯಮಿ ಲಾಲಸಾಬ ಅರಗಂಜಿ ಹೇಳಿದರು.

ತಾಲೂಕಿನ ಶಿರೋಳ ಗ್ರಾಮದ ಸರ್ಕಾರಿ ಗಂಡು ಮಕ್ಕಳ ಶಾಲೆಗೆ ಲಾಲಸಾಬ ಅರಗಂಜಿ ಅಭಿಮಾನಿ ಬಳಗದಿಂದ ಟಿವಿ ಕೊಡುಗೆ ನೀಡಿದ ನಿಮಿತ್ತ ಶಾಲಾ ಶಿಕ್ಷಕ ಸಿಬ್ಬಂದಿ ವರ್ಗದವರು ಏರ್ಪಡಿಸಿದ್ದ




ಅಭಿನಂದನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಾಲೆಯ ಪ್ರಧಾನ ಗುರುಗಳಾದ ಎಸ್.ಎಂ. ಶೀರಿ ಮಾತನಾಡಿ, ಲಾಲಸಾಬ ಅರಗಂಜಿ ಅಭಿಮಾನಿ ಬಳಗದಿಂದ ಉತ್ತಮ ಕಾರ್ಯಗಳಾಗುತ್ತಿವೆ. ತಂತ್ರಜ್ಞಾನದ ಕಾಲದಲ್ಲಿ ಶಾಲಾ ಮಕ್ಕಳಿಗೆ ಡಿಜಿಟಲ್ ಮೂಲಕ ಪಾಠ ಮಾಡುವುದರಿಂದ ಸಣ್ಣ ಸಮಯದಲ್ಲಿ ಹೆಚ್ಚಿನ ವಿಷಯಗಳನ್ನು ಮನವರಿಕೆ ಮಾಡಲು ಸಾಧ್ಯವಾಗುತ್ತದೆ ಎಂದರು.

ಎಸ್.ಬಿ. ದಾಸರ ಗುರುಗಳು ಮಾತನಾಡಿ, ತಂದೆಯವರ ಮಾರ್ಗದಲ್ಲೇ ಸಾಗುತ್ತಿರುವ ಲಾಲಸಾಬ ಅರಗಂಜಿ ಬಡವರಿಗೆ, ರೈತಾಪಿ ವರ್ಗಕ್ಕೆ, ವಿದ್ಯಾರ್ಥಿಗಳಿಗೆ ಬಹಳಷ್ಟು ಪ್ರೋತ್ಸಾಹ, ಬೆಂಬಲ ನೀಡುತ್ತಾ ಸ್ಫೂರ್ತಿಯಾಗಿ ನಿಂತಿದ್ದಾರೆ ಎಂದರು

ಗಿರೀಶ ಗಾಣಿಗೇರ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ಪ್ರವೀಣ ಕುಲಕರ್ಣಿ, ಎಸ್.ಪಿ. ಅಂಬೋರೆ, ಅಭಿಮಾನಿ ಬಳಗದ ಶರಣಪ್ಪ ಕಾಡಪ್ಪನವರ, ದ್ಯಾಮಣ್ಣ ತೆಗ್ಗಿ, ಪರಶುರಾಮ ರಾಥೋಡ್, ಅಶೋಕ ಸುಣಗಾರ, ರಾಜೇಸಾಬ ಚಳ್ಳಮರದ, ಶರಣಪ್ಪ ಸೂಡಿ ಮುಂತಾದವರು ಉಪಸ್ಥಿತರಿದ್ದರು.

# 'ವೈದ್ಯವಿಭೂಷಣ' ಡಾ. ನೀಲಗುಂದರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ದಕ್ಷತೆ ಮತ್ತು ಪ್ರಮಾಣಿಕತೆಗೆ ಹೆಸರಾದ ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಎಸ್.ಎಸ್. ನೀಲಗುಂದರಿಗೆ 'ವೈದ್ಯವಿಭೂಷಣ' ಪ್ರಶಸ್ತಿ ದೊರತಿರುವುದು ನಮಗೆಲ್ಲ ಸಂತಸವನ್ನುಂಟುಮಾಡಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಕಾರ್ಯಾಧ್ಯಕ್ಷರಾದ ಸಿದ್ದಪ್ಪ ಎನ್.ಲಿಂಗದಾಳ ಹೇಳಿದರು.

ಅವರು ಕರ್ನಾಟಕ ರಾಜ್ಯ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘದಿಂದ ವೈದ್ಯವಿಭೂಷಣ ಪ್ರಶಸ್ತಿ ಪುರಸ್ಕೃತ ಡಿ.ಎಚ್.ಓ ಡಾ. ಎಸ್.ಎಸ್. ನೀಲಗುಂದರ ಸನ್ಮಾನ ಸಮಾರಂಭದಲ್ಲಿ ಮಾತನಾಡಿ, ಅವರಿಗೆ ಮುಂದಿನ ದಿನಮಾನಗಳಲ್ಲಿ ಅತ್ಯುನ್ನತವಾದ ರಾಜ್ಯ ಮತ್ತು ರಾಷ್ಟ್ರಮಟ್ಟದ ಪ್ರಶಸ್ತಿಗಳು ದೊರೆಯಲೆಂದು ಶುಭ ಕೋರಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ. ಎಸ್.ಎಸ್. ನೀಲಗುಂದ, ಸಾರ್ವಾಜನಿಕರಿಗೆ ಆರೋಗ್ಯ ಇಲಾಖೆಯ ಸೇವೆಯನ್ನು ನೀಡುವಲ್ಲಿ ಇಲಾಖೆಯ ಎಲ್ಲ ನೌಕರರು ಅಧಿಕಾರಿಗಳು ಉತ್ತಮ ಕಾರ್ಯವನ್ನು ಮಾಡಿ. ಇಲಾಖೆಯ ಎಲ್ಲಾ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಿ ಗದಗ ಜಿಲ್ಲೆಯ ಗೌರವವನ್ನು ಹೆಚ್ಚಿಸಿ ಎಂದು ಹೇಳಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘದ ರಾಜ್ಯ ಪರಿಷತ್ ಸದಸ್ಯರಾದ ಮಲ್ಲಿಕಾರ್ಜುನ್ ಎಫ್. ಕಲಕಂಬಿ ಮತ್ತು ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘದ ಜಿಲ್ಲಾ ನಿರ್ದೇಶಕ ಅಜಯ್ ಕುಮಾರ್ ಕಲಾಲ ಡಾ. ನೀಲಗುಂದರನ್ನು ಸನ್ಮಾನಿಸಿ ಶುಭಕೋರಿದರು.

ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಸಂಘದ ಗದಗ ಅಧ್ಯಕ್ಷರಾದ ಬಿ.ಸಿ. ಹಿರೇಹಾಳ, ಜಿಲ್ಲಾ ಕಾರ್ಯದರ್ಶಿ ಕೆ.ವಿ. ಬಡಿಗೇರ್, ಕೃಷ್ಣಾ ಗಾಡರಡ್ಡಿ, ಪ್ರಭು ಹೊನುಗುಡಿ, ಎಂ.ಎಚ್. ಕದಂಪುರ, ವೈ.ಎನ್. ಕಡೆಮನಿ, ಎಸ್‌ಎಲ್ ಕೋರಿ, ಗೂಡುನಾಯ್ಕರ್, ಎಸ್.ಎಸ್. ಕುಬಸದ ದೇವರಮನಿ ಇದ್ದರು.

# ಹಣಕ್ಕಾಗಿ ಕಿರುಕುಳ: ಡೆತ್ ನೋಟ್ ಬರೆದಿಟ್ಟು ವಿದ್ಯಾರ್ಥಿ ನೇಣಿಗೆ ಶರಣು..!

■ವಿಜಯಸಾಕ್ಷಿ ಸುದ್ದಿ, ತುಮಕೂರು

ಹಣಕ್ಕಾಗಿ ಕಿರುಕುಳ ನೀಡಿದ ಹಿನ್ನೆಲೆಯಲ್ಲಿ ಡೆತ್ ನೋಟ್ ಬರೆದಿಟ್ಟು ವಿದ್ಯಾರ್ಥಿ ನೇಣಿಗೆ ಶರಣಾಗಿರುವ ಘಟನೆ ತುಮಕೂರು ಜಿಲ್ಲೆಯ ಶಿರಾ ನಗರದ ಸಂತೇಪೇಟೆಯಲ್ಲಿ ನಡೆದಿದೆ.

ವಿವೇಕ್ (23) ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಯಾಗಿದ್ದು, ಫೈನಲ್ ಇಯರ್ ಬಿಎಸ್ಸಿ ವ್ಯಾಸಂಗ ಮಾಡುತ್ತಿದ್ದ ವಿವೇಕ್, ವಿದ್ಯಾಭ್ಯಾಸದ ಜೊತೆಗೆ ಮಶ್ರೂಮ್ ಬ್ಯುಸಿನೆಸ್ ಶುರು ಮಾಡಿದ್ದನು.

ಮಶ್ರೂಮ್ ಬೇಸಾಯದ ಬಗ್ಗೆ ಹೃತ್ವಿಕ್ ಬಳಿ ಟ್ರೈನಿಂಗ್ ಪಡೆದು ನಂತರ ಬೀಜ ಖರೀದಿಸಿದ್ದನು. ಬ್ಯುಸಿನೆಸ್ ಚೆನ್ನಾಗಿ ಆಗುತ್ತಿದ್ದರಿಂದ ಹೃತ್ವಿಕ್ ಮತ್ತು ಅಂಜನ್ 50 ಸಾವಿರಕ್ಕೆ ಬೇಡಿಕೆ ಇಟ್ಟಿದ್ದರು. ಹಣ ಕೊಡದಿದ್ದರೆ ನಿಮ್ಮ ತಂದೆ ಮತ್ತು ತಾಯಿಯನ್ನ ಮುಗಿಸುತ್ತೇವೆ ಎಂದು ಆಗಾಗ ಬೆದರಿಸುತ್ತಿದ್ದರು. ಮನೆಯ ಒಡವೆ ಮತ್ತು ತಾಯಿಯ ಮಾಂಗಲ್ಯ ಸರ ಗಿರವಿ ಇಟ್ಟು 40 ಸಾವಿರ ಹೊಂದಿಸಿ ವಿವೇಕ್ ಕೊಟ್ಟಿದ್ದನು.

ಮತ್ತೆ ಹಣಕ್ಕೆ ಬೇಡಿಕೆ ಇಟ್ಟಿದ್ದ ಹೃತ್ವಿಕ್ ಮತ್ತು ಅಂಜನ್, ಹಣ ಕೊಡದಿದ್ದಕ್ಕೆ ವಿವೇಕ್ ಎಕ್ಸಾಮ್ ಬರೆಯೋದುನ್ನ ತಪ್ಪಿಸಿ ಅಪಹರಣ ಮಾಡಿ ರೂಮಿನಲ್ಲಿ ಕೂಡಿ ಹಾಕಿದ್ದರು. ಇಬ್ಬರು ಆರೋಪಿಗಳು ಹೃತ್ವಿಕ್ ಹತ್ರ ಸಿಗುವುದು ಕಳಪೆ ಮಶ್ರೂಮ್ ಅಂತ ರೈತರನ್ನ ವಿವೇಕ್ ಮೇಲೆ ಎತ್ತಿಕಟ್ಟಿದ್ದರು.

ಬೇಸತ್ತ ವಿವೇಕ್ ಹೃತ್ವಿಕ್ ಮತ್ತು ಅಂಜನ್ ಕಿರುಕುಳಕ್ಕೆ ಹೆದರಿ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದೇನೆಂದು ಡೆತ್ ಬರದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಇನ್ನೂ ಈ ಘಟನೆ ಸಂಬಂಧ ಶಿರಾ ನಗರ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

# ರನ್ಯಾ ರಾವ್ ಮನೆಯಲ್ಲಿ ಚಿನ್ನ, ನಗದು ಸೇರಿ 17.29 ಕೋಟಿ ಪತ್ತೆ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ನಟಿ ರನ್ಯಾ ರಾವ್ ಅವರನ್ನು ಪೊಲೀಸರು ಬಂಧಿಸಿದ್ದಾರೆ. 14.20 ಕೆಜಿ ಚಿನ್ನ ಕಳ್ಳಸಾಗಣೆ ಮಾಡಿರುವ ಆರೋಪ ರನ್ಯಾ ರಾವ್ ಮೇಲೆ ಕೇಳಿ ಬಂದಿದ್ದು ನಟಿಯನ್ನು 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ. ಇದೀಗ ನಟಿಯ ಬಳಿಯಿಂದ ಚಿನ್ನ, ನಗದು ಸೇರಿ 17.29 ಕೋಟಿ ರೂಪಾಯಿ ಮೌಲ್ಯದ ವಸ್ತುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಇತಿಹಾಸದಲ್ಲಿಯೇ ಇಷ್ಟು ದೊಡ್ಡ ಮೊತ್ತದ ಚಿನ್ನ ವಶಪಡಿಸಿಕೊಂಡಿರುವುದು ಇದೇ ಮೊದಲು ಎನ್ನಲಾಗಿದೆ. ನಟಿಯನ್ನು ಬಂಧಿಸಿದ ಬಳಿಕ ಡಿಆರ್‌ಐ ಅಧಿಕಾರಿಗಳು ಆಕೆಯ ಮನೆಯಲ್ಲಿ ಪರಿಶೀಲನೆ ನಡೆಸಿದ್ದು ಈ ವೇಳೆ ಕೋಟ್ಯಾಂತರ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.


## ಗ್ರಾಮ ಪಂಚಾಯತ, ಕಾರ್ಯಾಲಯ, ಬೆಳ್ಳಟ್ಟಿ

ತಾಲೂಕ :–ಶಿರಹಟ್ಟಿ ಜಿಲ್ಲಾ:–ಗದಗ
ಸಂ.ಗ್ರಾ.ಪಂಬೆ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ:–06–03–2025

### : ದರಪಟ್ಟಿ ಪ್ರಕಟಣೆ :

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಬೆಳ್ಳಟ್ಟಿ ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಬೆಳ್ಳಟ್ಟಿ ಗ್ರಾಮದ ಅಳವಂಡಿಯವರ ಜಾಗೆಯಿಂದ ಬಸವರಡ್ಡಿ ಮಾದನೂರ ಮನೆಯವರಿಗೆ ಚರಂಡಿ ನಿರ್ಮಾಣ | 168629 | 1000 | ಖಾಲಿ ಟೆಂಡರ್ ಫಾರಂಗಳನ್ನು ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸತಕ್ಕದ್ದು. |
| 2 | ಬೆಳ್ಳಟ್ಟಿ ಗ್ರಾಮದ ಅಳವಂಡಿಯವರ ಹೊಲದಿಂದ ಮೊರಬದ ಹೊಲದವರಿಗೆ ರಸ್ತೆಗೆ ಮೊರಂ | 101161 | 1000 | |
| 3 | ಬೆಳ್ಳಟ್ಟಿ ಗ್ರಾಮದ ಅಶೋಕ ಜೈನ ಮನೆಯಿಂದ ತಿರಕಪ್ಪ ಮಹಾಜನಶೆಟ್ರ ಮನೆಯವರಿಗೆ ಸಿ ಸಿ ರಸ್ತೆ ನಿರ್ಮಾಣ | 332132 | 1000 | |
| 4 | ನಾರಾಯಣಪುರ ಗ್ರಾಮದ ಶ್ಯಾಗೋಟಿಯವರ ಮನೆಯಿಂದ ಗಣೇಶ ಮನೆಯವರಿಗೆ ಚರಂಡಿ ನಿರ್ಮಾಣ | 95541 | 1000 | |
| 5 | ಬೆಳ್ಳಟ್ಟಿ ಗ್ರಾಮದ ಪುರದಪ್ಪನವರ ಮನೆಯಿಂದ ವಿಭೂತಿಯವರ ಮನೆಯವರಿಗೆ ಚರಂಡಿ ನಿರ್ಮಾಣ | 179822 | 1000 | |
| 6 | ಬೆಳ್ಳಟ್ಟಿ ಗ್ರಾಮದ PWD ರಸ್ತೆಯಿಂದ ವಾಸಣ್ಣ ಬಸವರಡ್ಡಿ ಇವರ ಮನೆಯವರಿಗೆ ಸಿ ಸಿ ರಸ್ತೆ ನಿರ್ಮಾಣ | 332182 | 1000 | |
| 7 | ಬೆಳ್ಳಟ್ಟಿ ಗ್ರಾಮದ ವಾಸರಡ್ಡಿ ಬಸವರಡ್ಡಿ ಇವರ ಮನೆಯಿಂದ PWD ರಸ್ತೆಯವರಿಗೆ ಚರಂಡಿ ನಿರ್ಮಾಣ | 129254 | 1000 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ: 06–03–2025 ರಿಂದ 14–03–2025 ರವರೆಗೆ ಖಾಲಿ ದರಪಟ್ಟಿ ಫಾರಂ ನೀಡುವ ದಿನಾಂಕ: 06–03–2025 ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ: 14–03–2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ತೆರೆಯುವ ದಿನಾಂಕ: 14–03–2025 ಸಮಯ ಮಧ್ಯಾಹ್ನ 3.00 ಗಂಟೆ

ನಿಬಂಧನೆಗಳು :

1)ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಬೆಳ್ಳಟ್ಟಿಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/–
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
ಗ್ರಾಮ ಪಂಚಾಯತಿ ಬೆಳ್ಳಟ್ಟಿ

ಸಹಿ ಆಗಿದೆ/–
**ಅಧ್ಯಕ್ಷರು**
ಗ್ರಾಮ ಪಂಚಾಯತಿ ಬೆಳ್ಳಟ್ಟಿ

## ಗ್ರಾಮ ಪಂಚಾಯತ ಕಾರ್ಯಾಲಯ, ಕಳಸಾಪೂರ

ತಾಲೂಕ :– ಗದಗ ಜಿಲ್ಲಾ:– ಗದಗ
ಸಂ.ಗ್ರಾ.ಪಂ.ಕ/ಮ.ಗಾ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ: 05/03/2025

### : ದರಪಟ್ಟಿ ಪ್ರಕಟಣೆ :

ಅಧ್ಯಕ್ಷರು/ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕಳಸಾಪೂರ ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಕಳಸಾಪೂರ ಗ್ರಾಮದ ಮಲಿಯಮ್ಮ ಗುಡಿಯಿಂದ ಸಾರ್ವಜನಿಕ ಶೌಚಾಲಯದವರೆಗೆ ಗಟಾರ ನಿರ್ಮಾಣ | 62972 | 500 | ಖಾಲಿ ಟೆಂಡರ್ ಫಾರಂಗಳನ್ನು ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸತಕ್ಕದ್ದು. |
| 2 | ಕಳಸಾಪೂರ ಗ್ರಾಮದ ತಿಪ್ಪಣ್ಣ ಭೋಸಗಿ ಇವರ ಮನೆಯಿಂದ ಮಾಸಬ್ಬಿ ಪೆಂಡಾರಿ ಇವರ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 148752 | 500 | |
| 3 | ಕಳಸಾಪೂರ ತಾಂಡಾದ ಶ್ರೀ ಸೇವಾಲಾಲ ಸಮುದಾಯ ಭವನದಿಂದ ಕೊರಮ್ಮನ ಹಳ್ಳದವರೆಗೆ ಮೊರಂ ರಸ್ತೆ ನಿರ್ಮಾಣ | 96735 | 500 | |
| 4 | ಮಾರುತಿ ಪ್ರಭು ಲಮಾಣಿ ಮನೆಯಿಂದ ಗೀತಾ ಶಂಕ್ರಪ್ಪ ಲಮಾಣಿ ಇವರ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 375326 | 500 | |
| 5 | ಕಳಸಾಪೂರ ಗ್ರಾಮದ ಮೋಹನದಾಸ ಇವರ ಹೊಲದಿಂದ ಪರಶುರಾಮ ಕಟ್ಟಿಮನಿ ಇವರ ಹೊಲದವರೆಗೆ ಮೊರಂ ರಸ್ತೆ ನಿರ್ಮಾಣ | 96735 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ : 06/03/2025 ರಿಂದ 14/03/2025 ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ : 15/03/2025 ಮುಂಜಾನೆ 10.00 ಗಂಟೆಗೆಯಿಂದ ಮಧ್ಯಾಹ್ನ 2.30 ಗಂಟೆಯವರೆಗೆ ತೆರೆಯುವ ದಿನಾಂಕ ಹಾಗೂ ಸಮಯ : 15/03/2025 ಮಧ್ಯಾಹ್ನ 4.00 ಗಂಟೆ.

ನಿಬಂಧನೆಗಳು :

1) ಷರತ್ತು/ನಿಬಂಧನೆಗಳಿಗೆ,ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ (ರಜಾ ದಿನಗಳನ್ನು ಹೊರತುಪಡಿಸಿ) ಗ್ರಾಮ ಪಂಚಾಯತ ಕಛೇರಿಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/–
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
ಗ್ರಾಮ ಪಂಚಾಯತಿ ಕಳಸಾಪೂರ

ಸಹಿ ಆಗಿದೆ/–
**ಅಧ್ಯಕ್ಷರು**
ಗ್ರಾಮ ಪಂಚಾಯತಿ ಕಳಸಾಪೂರ

## ಪಟ್ಟಣ ಪಂಚಾಯತ ಕಾರ್ಯಾಲಯ, ಮುಳಗುಂದ– 582117

(ಜಿಲ್ಲೆ: ಗದಗ, ರಾಜ್ಯ: ಕರ್ನಾಟಕ)
**ಪೌರಾಡಳಿತ ಇಲಾಖೆ**
**TOWN PANCHAYAT COUNIL, MULGUND - 582117**

ಸಂ:ಪಪಂಮು/ತಾಂ.ವಿ./ಸಾಮಾನ್ಯ ನಿಧಿ/ವಾರ್ಷಿಕ ಟೆಂಡರ್ ಕು.ನೀ.ಸ.ಸಾ/ವಹಿ– /2024–25
ದಿನಾಂಕ:–04–03–2025

### ಅಲ್ಪಾವಧಿ ಮರು ಟೆಂಡರ್ ಪ್ರಕಟಣೆ
### ಕರ್ನಾಟಕ ಪಬ್ಲಿಕ್ ಪ್ರೋಕ್ಯೂರಮೆಂಟ್ ಮೂಲಕ

ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ ಮುಳಗುಂದ ಇವರಿಂದ ಮುಳಗುಂದ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಕರ್ನಾಟಕ ಪಾರದರ್ಶಕತೆ ಅಧಿನಿಯಮ–2000ರ ಪ್ರಕಾರ "ಕರ್ನಾಟಕ ಪಬ್ಲಿಕ್ ಪ್ರೋಕ್ಯೂರಮೆಂಟ್ ಪೋರ್ಟಲ್" ಪದ್ಧತಿಯಲ್ಲಿ ಸನ್.2025–26ನೇ ಸಾಲಿನ ಪಟ್ಟಣ ಪಂಚಾಯತ ಸಾಮಾನ್ಯ ನಿಧಿ ಅನುದಾನದಡಿ ಇಂಡೆಂಟ ನಂಬರಗಳ ಸಂಖ್ಯೆಗಳು–**DMA/2024-25/IND4222/CALL-2** ವಾರ್ಷಿಕವಾಗಿ ನೀರು ಸರಬರಾಜು ಸಾಮಗ್ರಿಗಳನ್ನು ಪೂರೈಸುವದು ಹಾಗೂ **DMA/2024-25/SE4443/CALL-2** ವಾರ್ಷಿಕವಾಗಿ ನೀರು ಸರಬರಾಜು ಮೋಟರ್ ಪಂಪಗಳನ್ನು ರಿಪೇರಿ ಮಾಡಿ ಪೂರೈಸುವದಕ್ಕಾಗಿ ಕರ್ನಾಟಕ ಪಬ್ಲಿಕ್ ಪ್ರೋಕ್ಯೂರಮೆಂಟ್ ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಚಾಲ್ತಿ ಸಾಲಿನ ಅರ್ಹ ಗುತ್ತಿಗೆದಾರರಿಂದ ಟೆಂಡರನ್ನು ಆಹ್ವಾನಿಸಲಾಗಿದೆ. ಇ–ಪ್ರೋಕ್ಯೂರಮೆಂಟ ದಾಖಲೆಗಳಿಗಾಗಿ http://kppp.karnataka.gov.in ರ ಮೂಲಕ ಕೆಳಗೆ ನಮೂದಿಸಿರುವ ದಿನಾಂಕದಂದು ಆನ್‌ಲೈನ್ ಮೂಲಕವೇ ಟೆಂಡರ್ ಸಲ್ಲಿಸುವದು.

(1) ಇ–ಪ್ರೋಕ್ಯೂರಮೆಂಟ್ ಪದ್ಧತಿಯಲ್ಲಿ ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ: **13–03–2025 ಸಂಜೆ:4.00** ಗಂಟೆಗೆ. (2) ಇ–ಪ್ರೋಕ್ಯೂರಮೆಂಟ್ ಪದ್ಧತಿಯಲ್ಲಿ ತಾಂತ್ರಿಕ ಬಿಡ್ ತೆರೆಯುವ ದಿನಾಂಕ: **14–03–2025 ಸಂಜೆ:4.30** ಗಂಟೆಗೆ. (3) ಇ–ಪ್ರೋಕ್ಯೂರಮೆಂಟ್ ಪದ್ಧತಿಯಲ್ಲಿ ಆರ್ಥಿಕ ಬಿಡ್ ತೆರೆಯುವ ದಿನಾಂಕ: **15–03–2025 ಸಂಜೆ:4:30** ಗಂಟೆಗೆ.

ನಿಗಧಿ ಪಡಿಸಿದ ದಿನಾಂಕಗಳು ಒಂದು ವೇಳೆ ರಜಾ ದಿನಗಳನ್ನಾಗಿ ಘೋಷಿಸಲ್ಪಟ್ಟರೆ ಮುಂದಿನ ದಿನಾಂಕವನ್ನು ಪರಿಗಣಿಸಲಾಗುವದು. ಯಾವುದೇ ತಿದ್ದು ಪಡಿಗಳನ್ನು ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ.

ಈ ಕಛೇರಿಯಲ್ಲಿ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲಾ ಕಾಮಗಾರಿ ಇ.ಎಂ.ಡಿ. ಪೂರ್ಣಗೊಳಿಸುವ ಅವಧಿ, ಗುತ್ತಿಗೆದಾರರ ದರ್ಜೆ ಹಾಗೂ ಇನ್ನಿತರ ಹೆಚ್ಚಿನ ಮಾಹಿತಿ ಹಾಗೂ ಷರತ್ತುಗಳಿಗೆ ಕಛೇರಿಯ ವೆಬ್‌ಸೈಟ್ http://www.mulagundatown.mrc.gov.in ಹಾಗೂ ಕಛೇರಿ ವೇಳೆಯಲ್ಲಿ ಸಂಭಂಧಿಸಿದ ಶಾಖೆಯಲ್ಲಿ ಮಾಹಿತಿಯನ್ನು ಪಡೆಯಬಹುದು. ಇ–ಪೋರ್ಟಲ್‌ನ ಎಲ್ಲ ಷರತ್ತುಗಳು ಅನ್ವಯಿಸುತ್ತವೆ. ಹಾಗೂ ಟೆಂಡರ್ ಮಂಜೂರ ವ ನಾಮಂಜೂರ ಮಾಡುವ ಅಧಿಕಾರವನ್ನು ಪಟ್ಟಣ ಪಂಚಾಯತ ಕಾಯ್ದಿರಿಸಿಕೊಂಡಿದೆ.

**ಸಹಿ/–(ಶ್ರೀ.ಮಂಜುನಾಥ ಪಿ ಗುಳೇದ)**
**ಮುಖ್ಯಾಧಿಕಾರಿ**
**ಪಟ್ಟಣ ಪಂಚಾಯತ ಮುಳಗುಂದ**

**ಸಹಿ/– ( ಶ್ರೀಮತಿ.ಯಲ್ಲವ್ವ ಕೋಂ.ಬ ಕವಲೂರ)**
**ಅಧ್ಯಕ್ಷರು**
**ಪಟ್ಟಣ ಪಂಚಾಯತ ಮುಳಗುಂದ**

ವಾ.ಸಾ.ಇ/ಗದಗ/664/ದೇಶಪಾಂಡೆಪಬ್ಲಿಸಿಟಿ/2024–25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka